# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 | Issue : 86 | MONDAY 08-06-2026 | PRGI No : KNKAN/26/A0962 | Pages:4 | Rs.2.00 | M: 9742418836


## ನಾನು ನಿಮ್ಮ ಮನೆ ಮಗ



ಕನಕಪುರ/ಬೆಂಗಳೂರು: ನಾನು ಮುಖ್ಯಮಂತ್ರಿಯಾಗಿದ್ದೇನೆ ಎನ್ನುವುದಕ್ಕಿಂತ ಮೊದಲು , ನಿಮ್ಮ ಮನೆ ಮಗ. ನಾನು ನಿಮ್ಮ ಸೇವಕ ಜೀವನದಲ್ಲಿ ನಾವು ಮಾಡುವ ಪ್ರಯತ್ನಗಳು ಕೈಕೊಡಬಹುದು ಆದರೆ ಭಗವಂತನ ಕೃಪೆ ಇದ್ದರೆ , ಜನರ ಅಶೀರ್ವಾದವಿದ್ದರೇ ನಮ್ಮ ಫಲನೀಡಲಿದೆ, ನಾನು ಮುಖ್ಯಮಂತ್ರಿ ಕುರ್ಚಿಯಲ್ಲಿ ಕೂರಲು ಸಾಧ್ಯವಾಗಿದೆ. ನಿಮ್ಮ ಸಮಸ್ಯೆ ಪರಿಹಾರಕ್ಕೆ ನಾನು ಸದಾ ಸಿದ್ಧ ಎಂದು ಮುಖ್ಯಂತ್ರಿ ಡಿಕೆ ಶಿವಕುಮಾರ್ ಹೇಳಿದರು.

ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ವಹಿಸಿಕೊಂಡ ಡಿ.ಕೆ. ಶಿವಕುಮಾರ್ ಸ್ವಕ್ಷೇತ್ರವಾದ ಕನಕಪುರ ಹಾಗೂ ನೂತನವಾಗಿ ಘೋಷಣೆಯಾಗಿರುವ 'ಬೆಂಗಳೂರು ದಕ್ಷಿಣ ಜಿಲ್ಲೆ'ಯ ಹಾರೋಹಳ್ಳಿಗೆ ಪ್ರಥಮ ಬಾರಿಗೆ ಭೇಟಿ ನೀಡಿ ಜನತೆಯನ್ನು ಉದ್ದೇಶಿಸಿ ಮಾತನಾಡಿದರು.

ಸಿಎಂ ಆದ ಬಳಿಕ ಮೊದಲ ಬಾರಿಗೆ ಕ್ಷೇತ್ರಕ್ಕೆ ಆಗಮಿಸಿದ ತಮ್ಮ ನೆಚ್ಚಿನ ನಾಯಕನನ್ನು ಬರಮಾಡಿಕೊಳ್ಳಲು ತಾಲೂಕಿನಾದ್ಯಂತ ಹಬ್ಬದ ವಾತಾವರಣ ನಿರ್ಮಾಣವಾಗಿತ್ತು. ಅಭಿಮಾನಿಗಳು ಹಾಗೂ ಸಹಸ್ರಾರು ಕಾಂಗ್ರೆಸ್ ಕಾರ್ಯಕರ್ತರು ಡಿಕೆಶಿರಿಗೆ ಭರ್ಜರಿ ಸ್ವಾಗತ ಕೋರಿದರು.

ಕನಕಪುರಕ್ಕೆ ತೆರಳುವ ಮುನ್ನ ಸಿಎಂ ಡಿ.ಕೆ. ಶಿವಕುಮಾರ್ ಅವರು 'ನಮ್ಮ ಮೆಟ್ರೋ'ದಲ್ಲಿ ಸಾಮಾನ್ಯ ಸಾರ್ವಜನಿಕರೊಂದಿಗೆ ಪ್ರಯಾಣ ಬೆಳೆಸಿದರು. ಈ ಕುರಿತು 'ಎಕ್ಸ್' (ಟ್ವಿಟರ್) ಜಾಲತಾಣದಲ್ಲಿ ಪೋಸ್ಟ್ ಹಂಚಿಕೊಂಡ ಅವರು, "ಮೆಟ್ರೋದಲ್ಲಿ ಪ್ರಯಾಣಿಸುತ್ತಿರುವ ಬೆಂಗಳೂರಿನ ನಾಗರಿಕರ ಮುಖದಲ್ಲಿನ ನೆಮ್ಮದಿಯನ್ನು ಕಂಡಾಗ ಸುರಕ್ಷಿತ, ಜನಸ್ನೇಹಿ ಹಾಗೂ ಕೈಗೆಟುಕುವ ಸಾರ್ವಜನಿಕ ಸಾರಿಗೆ ನಮ್ಮ ಜನತೆಗೆ ಎಷ್ಟು ಮುಖ್ಯ ಎಂಬುದು ಮತ್ತೊಮ್ಮೆ ಮನವರಿಕೆಯಾಯಿತು. ಬೆಂಗಳೂರು ನಮ್ಮೆಲ್ಲರ ಹೆಮ್ಮೆ," ಎಂದು ಬರೆದುಕೊಂಡಿದ್ದಾರೆ.

ಹಾಗೂ ಜಿರೋ ಟ್ರಾಫಿಕ್‌ನಿಂದ ಜನಸಾಮಾನ್ಯರಿಗೆ ಆಗುವ ತೊಂದರೆ ತಪ್ಪಿಸಲು ಮುಖ್ಯಮಂತ್ರಿಗಳು ವಿಧಾನಸೌದದಿಂದ ರೇಷ್ಮೆ ಕೇಂದರದವರೆಗೆ ಮೆಟ್ರೋದಲ್ಲಿ ಪ್ರಯಾಣಿಸಿ ಗಮನ ಸೆಳೆದರು. ಈ ಮೊದಲು ಸಾರ್ವಜನಿಕವಾಗಿ ಸೆಲ್ಫಿ ಎಂದರೆ ಸಿಟ್ಟಾಗುತ್ತಿದ್ದ ಡಿಕೆಶಿಯವರು ಮೆಟ್ರೋದಲ್ಲಿ ಬಾಲಕಿಯರು ಹಾಗೂ ಯುವಕ ಯುವತಿಯರೊಂದಿಗೆ ಹಸ್ತಲಾಘವ ಮಾಡಿ ಸೆಲ್ಫಿ ಕ್ಲಿಕ್ಕಿಸಿಕೊಂಡು ಮಹಿಳೆಯರು ಹಾಗೂ ಇತರೆ ಪ್ರಯಾಣಿಕರೊಂದಿಗೆ ನಗುತ್ತಾ ಮಾತಾನಾಡಿದ್ದು ಕಂಡುಬಂದಿತು. ರೇಷ್ಮೆ ಸಂಸ್ಥೆ ನಿಲ್ದಾಣದಲ್ಲಿ ಇಳಿದು ನಂತರ ಕಾರಿನಲ್ಲಿ ಕನಕಪುರಕ್ಕೆ ತೆರಳಿದರು.

## ರಾಜಕೀಯ ಬದಿಗಿಟ್ಟು ಜನರ ಅಭಿವೃದ್ಧಿಗೆ ಕೈಜೋಡಿಸೋಣ: ಸಿಎಂ ಡಿಕೆ. ಶಿವಕುಮಾರ್ ಕರೆ



ಬೆಂಗಳೂರು: ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು ರಾಜ್ಯದ ಜನರ ಅಭಿವೃದ್ಧಿಗಾಗಿ ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕು ಎಂದು ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಶನಿವಾರ ಕರೆ ನೀಡಿದ್ದಾರೆ. ಇದೇ ವೇಳೆ ತಾವು ಶೀಘ್ರದಲ್ಲೇ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರನ್ನು ಭೇಟಿಯಾಗುತ್ತಿರುವುದಾಗಿಯೂ ತಿಳಿಸಿದ್ದಾರೆ.

ಕರ್ನಾಟಕದಲ್ಲಿ ಕಾಂಗ್ರೆಸ್ ಮುಖ್ಯಮಂತ್ರಿ ಬದಲಾವಣೆ ಜನರ ಆಕ್ರೋಶದ ಪರಿಣಾಮ ಎಂಬ ಪ್ರಧಾನಿ ಮೋದಿ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಡಿಕೆ ಶಿವಕುಮಾರ್ ಅವರು, "ಪ್ರಧಾನಿ ಮೋದಿ ಅವರು ನನಗೆ ಶುಭ ಹಾರೈಸಿದ್ದಾರೆ. ಅದಕ್ಕಾಗಿ ಅವರಿಗೆ ಧನ್ಯವಾದಗಳು. ನಾನು ಗೌರವಯುತವಾಗಿ ಅವರನ್ನು ಭೇಟಿ ಮಾಡುತ್ತೇನೆ. ಅವರು ರಾಜಕೀಯ ಮಾಡಬೇಕಾಗಿಲ್ಲ, ನಾವೂ ರಾಜಕೀಯ ಮಾಡಬೇಕಾಗಿಲ್ಲ. ರಾಜ್ಯದ ಜನರ ಹಿತದೃಷ್ಟಿಯಿಂದ ಎಲ್ಲರೂ ಒಂದಾಗಿ ಅಗತ್ಯ ಕೆಲಸಗಳನ್ನು ಮಾಡೋಣ ಎಂದು ಹೇಳಿದ್ದಾರೆ.

ಇದೇ ವೇಳೆ ರಾಜ್ಯ ಬಿಜೆಪಿಯು ಕಾಂಗ್ರೆಸ್ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದೆ. ಸಚಿವರಿಗೆ ಖಾತೆ ಹಂಚಿಕೆ ವಿಚಾರವಾಗಿ ಕಾಂಗ್ರೆಸ್‌ನಲ್ಲಿ ಉಂಟಾಗಿರುವ ಭಿನ್ನಾಭಿಪ್ರಾಯಗಳನ್ನು ಉಲ್ಲೇಖಿಸಿರುವ ಬಿಜೆಪಿ, ಕರ್ನಾಟಕದ ಜನರು ಉತ್ತಮ ಆಡಳಿತಕ್ಕಾಗಿ ಮತ ನೀಡಿದ್ದರು. ಆದರೆ. ಅವರಿಗೆ ಸಿಕ್ಕಿರುವುದು ಅಸ್ಥಿರತೆ, ಒಳಜಗಳ ಮತ್ತು ಅಧಿಕಾರಕ್ಕಾಗಿ ನಿರಂತರ ಹೋರಾಟ ಎಂದು ಟೀಕಿಸಿದೆ.

ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪ್ರತಿಕ್ರಿಯಿಸಿರುವ ಬಿಜೆಪಿ, ಮುಖ್ಯಮಂತ್ರಿ ಹುದ್ದೆಗಾಗಿ ನಡೆದ ಅಧಿಕಾರದ ಕದನ ಕಾಂಗ್ರೆಸ್‌ನ ನಾಯಕತ್ವದ ಬಿಕ್ಕಟ್ಟನ್ನು ಬಯಲು ಮಾಡಿದೆ ಎಂದು ಆರೋಪಿಸಿದೆ. ರಾಜ್ಯ ನಾಯಕತ್ವದಿಂದ ಹಿಡಿದು ಪಕ್ಷದ ಹೈಕಮಾಂಡ್‌ವರೆಗೆ ನಾಯಕತ್ವದ ಕೊರತೆ ಸ್ಪಷ್ಟವಾಗಿದೆ ಎಂದು ಹೇಳಿದೆ.

ಹಿಂದಿನ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿ ಭ್ರಷ್ಟಾಚಾರ ಮತ್ತು ಆಡಳಿತ ವೈಫಲ್ಯದ ಆರೋಪಗಳು ಕೇಳಿಬಂದರೂ ಕಾಂಗ್ರೆಸ್ ಹೈಕಮಾಂಡ್ ಮೌನವಾಗಿತ್ತು. ಇದೀಗ ಹೊಸ ಸರ್ಕಾರ ಅಧಿಕಾರಕ್ಕೆ ಬಂದ ಕೆಲವೇ ದಿನಗಳಲ್ಲಿ ಖಾತೆ ಹಂಚಿಕೆ ಕುರಿತ ಅಸಮಾಧಾನ ಮತ್ತು ಸಾರ್ವಜನಿಕ ಭಿನ್ನಾಭಿಪ್ರಾಯಗಳು ಬಹಿರಂಗವಾಗುತ್ತಿವೆ.

ಕಾಂಗ್ರೆಸ್ ನಾಯಕರಿಗೆ ಜನಪರ ಆಡಳಿತಕ್ಕಿಂತ ಅಧಿಕಾರ, ಹುದ್ದೆ ಮತ್ತು ರಾಜಕೀಯ ಉಳಿವಿನ ಚಿಂತೆಯೇ ಹೆಚ್ಚಾಗಿದೆ. ಆಡಳಿತ ಹಿಂಬದಿಗೆ ಸರಿದಿದ್ದು, ಪಕ್ಷದ ಹಿರಿಯ ನಾಯಕ ರಾಹುಲ್ ಗಾಂಧಿ ಈ ಬಿಕ್ಕಟ್ಟಿನ ಸಂದರ್ಭದಲ್ಲೂ ಕಾಣಿಸಿಕೊಳ್ಳುತ್ತಿಲ್ಲ ಎಂದು ಟೀಕಿಸಿದೆ.

### ಪ್ರತಿವರ್ಷ 1000 ಗಿಡಗಳನ್ನು ನೆಡುವ ಸಂಕಲ್ಪ: ಅಧ್ಯಕ್ಷ ಪರಪ್ಪ ಸವದಿ

## ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯಲ್ಲಿ ವಿಶ್ವ ಪರಿಸರ ದಿನಾಚರಣೆ




**ಪರಿಸರ ಸಂರಕ್ಷಣೆಗಾಗಿ ಶ್ರಮಿಸೋಣ**

"ಪರಿಸರ ರಕ್ಷಣೆಗಾಗಿ ಪ್ರತಿಯೊಬ್ಬರೂ ಕಾಳಜಿ ವಹಿಸಿ ಗಿಡ ಮರಗಳನ್ನು ನೆಟ್ಟು ಬೆಳೆಸಬೇಕು. ಇದರಿಂದ ಜೀವ ಸಂಕುಲ ಬದುಕಲು ಸಾಧ್ಯವಾಗುತ್ತದೆ. ಪರಿಸರ ನಾಶವಾದರೆ ಮನುಷ್ಯ ಬದುಕಲು ಸಾಧ್ಯವಾಗುವುದಿಲ್ಲ. ಮುಂದಿನ ಪೀಳಿಗೆಗೆ ಉತ್ತಮ ಬದುಕು ಕಟ್ಟಿಕೊಳ್ಳಲು ಸುಸ್ಥಿರ ಪರಿಸರ ನಿರ್ಮಾಣ ಮಾಡುವುದು ಪ್ರತಿಯೊಬ್ಬರ ಹೊಣೆಯಾಗಿದೆ. ಸ್ವಚ್ಛ ಸುಂದರ ಪರಿಸರ ನಿರ್ಮಾಣಕ್ಕಾಗಿ ನಿತ್ಯವೂ ನಾವು ಒಂದಿಷ್ಟು ಕೊಡುಗೆ ನೀಡಬೇಕು. ನಾವೆಲ್ಲರೂ ಪರಿಸರ ಸಂರಕ್ಷಣೆಗಾಗಿ ಶ್ರಮಿಸೋಣ."

**ಪರಪ್ಪಾ ಸವದಿ,**
**ಕಾರ್ಖಾನೆಯ ಅಧ್ಯಕ್ಷರು**

**ಬೆಳಗಾವಿ ವಾರ್ತೆ ಅಥಣಿ :** ಪರಿಸರದಲ್ಲಿ ಸಮತೋಲನ ಕಾಯ್ದುಕೊಳ್ಳಲು ಗಿಡ ಮರಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ನೆಡುವುದು ಅಗತ್ಯ. ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆಯ ಆವರಣದಲ್ಲಿ ಪ್ರತಿ ವರ್ಷ ಒಂದು ಸಾವಿರ ಗಿಡಗಳನ್ನು ನೆಡುವ ಸಂಕಲ್ಪ ಹೊಂದಲಾಗಿದೆ ಎಂದು ಕಾರ್ಖಾನೆಯ ಅಧ್ಯಕ್ಷ ಪರಪ್ಪ ಸವದಿ ಹೇಳಿದರು.

ಅವರು ಶುಕ್ರವಾರ ಕೃಷ್ಣ ಸಹಕಾರಿ ಸಕ್ಕರೆ ಕಾರ್ಖಾನೆಯ ಆವರಣದಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ 1000 ಗಿಡಗಳನ್ನು ನೆಡುವ ಕಾರ್ಯಕ್ಕೆ ಚಾಲನೆ ನೀಡಿ ಮಾತನಾಡಿದರು.

ಕಾರ್ಖಾನೆಯ ಆವರಣದಲ್ಲಿ ಈಗಾಗಲೇ ರೂ.10,000ಕ್ಕೂ ಅಧಿಕ ಗಿಡಮರಗಳನ್ನು ನೀಡಲಾಗಿದೆ. ಮುಂಬರುವ ದಿನಗಳಲ್ಲಿ ಇನ್ನು ಸಾವಿರಾರು ಗಿಡಗಳನ್ನು ನೆಡುವ ಸಂಕಲ್ಪ ಹೊಂದಿದ್ದೇವೆ ಎಂದರು.

ನಾವು ಬದುಕುತ್ತಿರುವ ಸುತ್ತಮುತ್ತಲಿನ ವಾತಾವರಣವೇ ನಮ್ಮ ಪರಿಸರ. ಗಾಳಿ, ನೀರು, ಮಣ್ಣು, ಸಸ್ಯಗಳು ಮತ್ತು ಪ್ರಾಣಿ ಸಂಕುಲಗಳು ಪರಿಸರದ ಅವಿಭಾಜ್ಯ ಅಂಗಗಳು. ಮಾನವನ ಅಸ್ತಿತ್ವಕ್ಕೆ ಪರಿಸರವೇ ಮೂಲಾಧಾರ. ಆದರೆ, ಇತ್ತೀಚಿನ ದಿನಗಳಲ್ಲಿ ಹೆಚ್ಚುತ್ತಿರುವ ಜನಸಂಖ್ಯೆ, ನಗರೀಕರಣ ಮತ್ತು ಕೈಗಾರಿಕೀಕರಣದಿಂದಾಗಿ ಪರಿಸರವು ತೀವ್ರ ಹಾನಿಯನ್ನು ಎದುರಿಸುತ್ತಿದೆ. ಆದ್ದರಿಂದ ಹೆಚ್ಚು ಗಿಡ ಮರಗಳನ್ನು ಬೆಳೆಸಿ ಪರಿಸರ ರಕ್ಷಣೆ ಕಾಳಜಿ ವಹಿಸುವುದು ಪ್ರತಿಯೊಬ್ಬರ ಹೊಣೆಯಾಗಿದೆ ಎಂದು ಹೇಳಿದರು.

ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ಸದಸ್ಯರು ಹಾಗೂ ಅಧಿಕಾರಿಗಳಾದ ಎಸ್.ಎ. ಠಕ್ಕಣ್ಣವರ, ಸಿ.ಎಸ್. ಪಾಟೀಲ, ವಿ.ಪಿ. ಮನಗೂಳಿ, ಡಿ.ಬಿ. ದೇಸಾಯಿ, ಎ.ಜಿ. ಕುಲಕರ್ಣಿ, ದೇಶಪಾಂಡೆ, ಎಸ್.ಎಸ್. ಪಾಟೀಲ ಹಾಗೂ ಕಾರ್ಖಾನೆಯ ಕಾರ್ಮಿಕ ವರ್ಗದವರು ಹಾಗೂ ಸಮಸ್ತ ಸಿಬ್ಬಂದಿಗಳು ಇದ್ದರು.

## 2028ರೊಳಗೆ ರಾಷ್ಟ್ರೀಯ ಹೆದ್ದಾರಿ ಪೂರ್ಣ: ಪ್ರಿಯಾಂಕಾ ಜಾರಕಿಹೊಳಿ



ಮೋಳೆ: ನವಲಿಹಾಳ ಗ್ರಾಮದ ಹತ್ತಿರ ನಿರ್ಮಾಣವಾಗುತ್ತಿರುವ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಸಂಸದೆ ಪ್ರಿಯಾಂಕಾ ಜಾರಕಿಹೊಳಿಯವರು ವೀಕ್ಷಣೆ ಮಾಡುತ್ತಿರುವ ಚಿತ್ರ

**ಬೆಳಗಾವಿ ವಾರ್ತೆ ಮೋಳೆ:** ಚಿಕ್ಕೋಡಿ ಲೋಕಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ರಾಷ್ಟ್ರೀಯ ಹೆದ್ದಾರಿಯನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಿ ಎಂದು ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳಿಗೆ ಮತ್ತು ಗುತ್ತಿಗೆದಾರರಿಗೆ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಸೂಚನೆ ನೀಡಿದರು.

ಅವರು ಕಾಗವಾಡ ವಿಧಾನಸಭಾ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ನವಲಿಹಾಳ ಗ್ರಾಮದ ಹತ್ತಿರ ನಿರ್ಮಾಣ ಹಂತದ ರಾಷ್ಟ್ರೀಯ ಹೆದ್ದಾರಿ ಕಾಮಗಾರಿಯನ್ನು ಅಧಿಕಾರಿಗಳ ತಂಡದೊಂದಿಗೆ ವೀಕ್ಷಿಸಿ ಮಾತನಾಡಿದರು.

ಮುರಗುಂಡಿಯಿಂದ ಗೋಟುರವರೆಗಿನ ಕಾಮಗಾರಿಯಲ್ಲಿ ಅನೇಕ ತಾಂತ್ರಿಕ ಅಡಚನೆಗಳು ಉಂಟಾಗಿರುವದರಿಂದ ಕಾಮಗಾರಿಯಲ್ಲಿ ವಿಳಂಬವಾಗುತ್ತಿದೆ.ಇದರಿಂದ ಜನಸಾಮಾನ್ಯರಿಗೆ ತೊಂದರೆ ಉಂಟಾಗುತ್ತಿದ್ದು,ತಕ್ಷಣ ಈ ಆಡಚಣೆಗಳನ್ನು ಬಗೆಹರಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿ ಕೊಡಬೇಕೆಂದು ಅಧಿಕಾರಿಗಳಿಗೆ ಆದೇಶಿಸಿದರು.

ರಾಜ್ಯದ ಕಾಂಗ್ರೆಸ್ ಸರಕಾರ ಗ್ಯಾರಂಟಿ ಯೋಜನೆಗಳನ್ನು ಜನರಿಗೆ ನೀಡುವುದರ ಜೊತೆಗೆ ಅತಿ ಹೆಚ್ಚು ಉತ್ತಮ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳುತ್ತಿದೆವೆ ಎಂದರು. ಇಂದು ಉಗಾರ, ಮುರಗುಂಡಿ. ಬಡಚಿ ಗ್ರಾಮಗಳಲ್ಲಿ 5 ಕೋಟಿ ರೂ ವೆಚ್ಚದ ಕಾಮಗಾರಿಗಳಿಗೆ ಚಾಲನೆ ನೀಡಿದರು.

ಈ ವೇಳೆ ಕ್ಷೇತ್ರರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿವೇಕ ಮಠ, ಶಿಕ್ಷಣಾಧಿಕಾರಿ ಎಂ. ಆರ್. ಮುಂಜೆ, ಕಾಂಗ್ರೆಸ್ ಧುರಿಣರಾದ ರಮೇಶ್ ಸಿಂದಗಿ, ಗಜಾನನ ಮಂಗಸೂಳಿ, ರಾವಸಾಹೇಬ್ ಐಹೊಳೆ, ಸುನಿತಾ ಐಹೊಳೆ, ರೇಖಾ ಪಾಟೀಲ ,ಗುತ್ತಿಗೆದಾರರಾದ ಚಿದಾನಂದ ಹಣಮಾಪೂರ,ಈಶ್ವರ ಸನದಿ,ಸೇರಿದಂತೆ ಅನೇಕರು ಇದ್ದರು.

### ಮುಂದೊಂದು ದಿನ ಆಮ್ಲಜನಕ ಕೊರತೆ ಆಗಬಹುದು, ಇವತ್ತೇ ಗಿಡ ಮರಗಳನ್ನು ಬೆಳೆಸಿ

## ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ನಂ. 01 ರಲ್ಲಿ ವಿಶ್ವ ಪರಿಸರ ದಿನಾಚರಣೆ

**ಬೆಳಗಾವಿ ವಾರ್ತೆ ಅಥಣಿ :** ಭೂಮಿಯ ಮೇಲೆ ಬದುಕುವ ಪ್ರತಿಯೊಂದು ಜೀವಿಗೆ ಬೆಳಕು, ನೀರು, ಗಾಳಿ, ಆಹಾರ ಮುಖ್ಯವಾಗಿವೆ. ಎಲ್ಲ ಪ್ರಾಣಿಗಳಲ್ಲಿ ಬುದ್ಧಿವಂತನಾಗಿರುವ ಮನುಷ್ಯ ತನ್ನ ಆಮಿಷಕ್ಕೆ ಅರಣ್ಯ ಸಂಪತ್ತನ್ನು ನಾಶ ಮಾಡುತ್ತಿದ್ದಾನೆ. ಇದರಿ ಂದ ಮುಂದಿನ ದಿನಗಳಲ್ಲಿ ಪರಿಸರ ದಲ್ಲಿ ಅಸಮತೋಲನ ಉಂಟಾಗಲಿದ್ದು, ಮುಂ ದೊಂದು ದಿನ ಆಕ್ಸಿಜನ್ ( ಶುದ್ಧ ಗಾಳಿ ) ಕೊರತೆ ಆಗಬಹುದು, ಆದ್ದರಿಂದ ನಾವೆ ಲ್ಲ ಎಚ್ಚೆತ್ತುಕೊಂಡು ಈಗಿನಿಂದಲೇ ಗಿಡಮ ರಗಳನ್ನು ನೆಟ್ಟು ಸಂರಕ್ಷಣೆ ಮಾಡುವುದು ಅಗತ್ಯ ಎಂದು ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಾಸಾಬ ತೆಲಸಂಗ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ನಂ. 01 ರಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶಾಲೆಯ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭೂಮಿ ಇದ್ದಷ್ಟೇ ಇದ್ದು, ದಿನದಿಂದ ದಿನಕ್ಕೆ ಜನಸಂಖ್ಯೆ ಹೆಚ್ಚಾಗುತ್ತಿದೆ. ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ಅರಣ್ಯಗಳನ್ನು ನಾಶ ಮಾಡಿ ಅನೇಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಮುಂಬರುವ ದಿನಗಳಲ್ಲಿ ಹವಾಮಾನದ ವೈಪರಿತದಿಂದ ಮನುಷ್ಯ ಸೇರಿದಂತೆ ಪ್ರಾಣಿ ಸಂಕುಲಕ್ಕೆ ಸಂಕಷ್ಟ ಎದುರಾಗಲಿದೆ. ಆದ್ದರಿಂದ ಪ್ರತಿಯೊಬ್ಬರೂ ಗಿಡಮರ ಗಳನ್ನು ಬೆಳೆಸಬೇಕು. ಶಾಲಾ ಹಂತದಲ್ಲಿ ಮಕ್ಕಳಿಗೆ ಪರಿಸರ ಸಂರಕ್ಷಣೆಯ ಮಹತ್ವ ವನ್ನ ತಿಳಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಶಾಲಾ ಮಕ್ಕಳಿಗೆ ಸಸಿಗಳನ್ನು ವಿತರಿಸಿದ ಅಥಣಿ ತಾಲೂಕಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್ ಎಸ್ ಹೂಟಿ ಮಾತನಾಡಿ ಪರಿಸರ ದಿನಾಚರಣೆ ಕೇವಲ ಫೋಟೋ ಪ್ರದರ್ಶನ ಮತ್ತು ಅಭಿಯಾನಕ್ಕೆ ಸೀಮಿತವಾಗಬಾರದು. ಶಾಲಾ ಹಂತದಲ್ಲಿ ಮಕ್ಕಳಿಗೆ ಗಿಡಮರಗಳು ಮತ್ತು ಅರಣ್ಯದ ಮಹತ್ವವನ್ನ ತಿಳಿಸುವುದರ ಜೊತೆಗೆ ಗಿಡಗಳನ್ನನು ಬೆಳೆಸಲು ಪ್ರೋತ್ಸಾಹಿಸಬೇಕ. ಶಾಲೆಯ ಆವರಣದಲ್ಲಿ ಮಕ್ಕಳಿಗೆ ಮತ್ತು ವರ್ಗ ಶಿಕ್ಷಕರಿಗೆ ವರ್ಷಷವಿಡೀ ಗಿಡಗಳ ಪೋಷಣೆ ಮಾಡಲು ದತ್ತು ನೀಡಬೇಕು ಎಂದು ಸಲಹೆ ನೀಡಿದರು.



ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಎಸ್ ಬಿ ಕಟಗೇರಿ ಮಾತನಾಡಿ ಪರಿಸರ ದಿನಾಚರಣೆಯ ಮಹತ್ವವನ್ನ ತಿಳಿಸಿದರು. ಈ ಸಂದರ್ಭದಲ್ಲಿ ಕೆ ಬಿ ಶಿರಗೂರ, ವೈ ಎಂ ನಡುವಿನಮನಿ, ಎಸ್ ಬಿ ಕೆಮ್ಮನ್ನವರ, ಬಿ ಎಂ ಅನಂತಪುರ, ಪಿ ಆರ್ ಬಸಗೌಡರ, ಎ ಪಿ ಬಡಕಂಬಿ ಸೇರಿದಂತೆ ಇನ್ನೇತರರು ಉಪಸ್ಥಿತರಿದ್ದರು.

## ರಾಷ್ಟ್ರೀಯ ಬಾಲ ಪುರಸ್ಕಾರಕ್ಕೆ ಅರ್ಜಿ

**ಬೆಳಗಾವಿ ವಾರ್ತೆ ಬಾಗಲಕೋಟೆ :** ಪ್ರಸಕ್ತ ಸಾಲಿನಲ್ಲಿ ಕೇಂದ್ರ ಸರಕಾರವು ಶೌರ್ಯ, ಸಮಾಜ ಸೇವೆ, ಪರಿಸರ, ಕ್ರೀಡೆ, ಕಲೆ–ಸಂಸ್ಕೃತಿ, ವಿಜ್ಞಾನ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧನೆಗೈದ 18 ವರ್ಷದ ಒಳಗಿನ ಮಕ್ಕಳಿಗೆ ಪ್ರಧಾನ ಮಂತ್ರಿ ರಾಷ್ಟ್ರೀಯ ಬಾಲ ಪುರಸ್ಕಾರಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ವೆಬ್‌ಸೈಟ್ http://awards.gov.in ಮೂಲಕ ಜುಲೈ 31 ರಂದು ಸಂಜೆ 5 ಗಂಟೆಯೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಸಲ್ಲಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ದೂಸಂ.08354–235708ಗೆ ಸಂಪರ್ಕಿಸಬಹುದಾಗಿದೆ.

# ಒಣದ್ರಾಕ್ಷಿ ಆಮದು: ಆತಂಕದಲ್ಲಿ ದ್ರಾಕ್ಷಿ ಬೆಳೆಗಾರರು–ಸಂಸದರಿಗೆ ಮನವಿ



**ಬೆಳಗಾವಿ ವಾರ್ತೆ ವಿಜಯಪುರ:** ಕಳೆದು ಎರಡು ವರ್ಷಗಳಿಂದ ಉತ್ತಮ ಇಳುವರಿಯಿಂದ ಒಳ್ಳೆಯ ದರ ಪಡೆದುಕೊಳ್ಳುತ್ತಿರುವ ಒಣದ್ರಾಕ್ಷಿ ಈಗ ವಿದೇಶಗಳಿಂದ ಭಾರತಕ್ಕೆ ಮತ್ತೆ ಒಣದ್ರಾಕ್ಷಿ ಆಮದು ಆಗುವ ವದಂತಿಯಿಂದ ದರ ಕಡಿಮೆಯಾಗುವ ಆತಂಕ ಎದುರಾಗಿದೆ ಎಂದು ದ್ರಾಕ್ಷಿ ಬೆಳೆಗಾರರ ಸಂಘದ ವತಿಯಿಂದ ಸಂಸದ ರಮೇಶ ಜಿಗಜಿಣಗಿ ಅವರಿಗೆ ಶನಿವಾರ ಮನವಿ ಸಲ್ಲಿಸಿ ರೈತರ ಸಂಕಷ್ಟದ ಕುರಿತು ವಿವರಿಸಿದರು.

ತಾಲ್ಲೂಕಿನ ದ್ರಾಕ್ಷಿ ಬೆಳೆಗಾರರು ಕಳೆದೆರಡು ವರ್ಷಗಳಿಂದ ಆಮದಾಗುತ್ತಿದ್ದ ಒಣದ್ರಾಕ್ಷಿಯನ್ನು ನಿಲ್ಲಿಸಿದ್ದರಿಂದ ದ್ರಾಕ್ಷಿಬೆಳೆಗೆ ಒಳ್ಳೆಯ ದರ ಬಂದು ರೈತರು ಸಾಲ ಮುಕ್ತರಾಗುತ್ತಿರುವಾಗ ಪ್ರಸ್ತುತ ವರ್ಷ ಮತ್ತೆ ಆಮದು ಆಗುವುದೆಂಬ ಸುದ್ದಿ ಹಬ್ಬಿದೆ. ಬೆಲೆಯನ್ನು ದಿನೇ ದಿನೇ ಕಡಿಮೆ ಮಾಡುತ್ತಿರುವರುದರಿಂದ ಮತ್ತೆ ರೈತರು ಆತಂಕಕ್ಕಿಡಾಗುವಂತಾಗಿದೆ. ಆದ್ದರಿಂದ ಸಂಸದರು ಸಂಬಂಧಿಸಿದ ಅಧಿಕಾಗಳಿಗೆ ಆಮದಾಗುತ್ತಿರುವ ಒಣದ್ರಾಕ್ಷಿಯನ್ನು ತಡೆಗಟ್ಟಲು ಕ್ರಮ ಕೈಗೊಂಡು ದ್ರಾಕ್ಷಿ ಬೆಳೆಗಾರರಿಗೆ ಬರುವ ಸಂಕಷ್ಟವನ್ನು ದೂರ ಮಾಡಬೇಕೆಂದು ಮನವಿಯಲ್ಲಿ ವಿವರಿಸಿದ್ದಾರೆ. ಈ ಸಂದರ್ಭದಲ್ಲಿ ದ್ರಾಕ್ಷಿ ಬೆಳೆಗಾರ 'ರಾದ ಮಂಜು ಬಿರಾದಾರ, ಸಂತೋಷ ಕಾಮಗೊಂಡ, ಬಾಪುರಾಯ ಮಸಳಿ, ಕು ಮಾರ ಗೊಳಸಂಗಿ, ಮಹಾಂತೇಶ ಬಿರಾ ದಾರ, ಪಾಂಡುರಂಗ ಸೊರಡಿ, ಮಲ್ಲು ಸುತಗುಂಡಿ, ಸಂತೋಷ ಜಮಖಂಡಿ, ಸಂ ತೋಷ ಹೊನವಾಡ, ಮಲ್ಲಿಕಾರ್ಜುನ ತುಳಜಾನ, ವಿನಾಯಕ ಹೊನವಾಡ ಇದ್ದರು.

# ನೇರ ಸಂದರ್ಶನ

**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲೆಯ ಜಿಲ್ಲಾ ಉದ್ಯೋಗ ವಿನಿಮಯ ಕಛೇರಿ, ವತಿಯಿಂದ ಜೂನ್ 11 ರಂದು ಗುರುವಾರ ರಂದು ಬೆಳಿಗ್ಗೆ 10–00 ಗಂಟೆಗೆ ನಗರದ ವಿವೇಕಾನಂದ ನಗರ 4ನೇ ಅಡ್ಡ ರಸ್ತೇ ಸಾಯಿ ಬಾಬಾ ದೇವಸ್ಥಾನ ಹಿಂದುಗಡೆ ಕೆ.ಎಚ್.ಬಿ ಕಾಲೋನಿ, ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ನೇರ ಸಂದರ್ಶನದಲ್ಲಿ ಸ್ವತಂತ್ರ ಮೈಕ್ರೋಪಿನ್ ಪ್ರೈವೇಟ ಲಿಮಿಟೆಡ, ಕಂಪನಿಗಳು ಭಾಗವಹಿಸಲಿದೆ. ಎಸ್.ಎಸ್.ಎಲ್.ಸಿ, ಪಿ,ಯು.ಸಿ, ಐಟಿಐ ಮತ್ತು ಯಾವುದೆ ಪದವಿ ಹೊಂದಿರಬೇಕು. 18 ರಿಂದ 30 ವಯಸಿನಲ್ಲಿರಬೇಕು. ಶಿರಹಟ್ಟಿ, ಮುಂಡರಗಿ, ಗದಗ, ಅಣ್ಣಿಗೇರಿ, ರೋಣ, ಗಜೇಂದ್ರಗಡದಲ್ಲಿ ಹುದ್ದೆಗಳು ಖಾಲಿ ಇವೆ. ಕಡ್ಡಾಯವಾಗಿ ಚಾಲನಾ ಪರವಾನಗಿ ಹಾಗೂ ದ್ವಿಚಕ್ರ ವಾಹನ ಹೊಂದಿರಬೇಕು.

ನೇರ ಸಂದರ್ಶನದಲ್ಲಿ ಪಾಲ್ಗೋಳುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, 2 ರೆಸ್ಯೂಮೆ(ಬಯೋಡಾಟಾ)ಪ್ರತಿಗಳು, ಮತ್ತು ಆಧಾರ ಕಾರ್ಡ್ ಝೆರಾಕ್ಸೊಂದಿಗೆ ಭಾಗವಹಿಸಬಹುದು. ನೇರ ಸಂದರ್ಶನದಲ್ಲಿ ಭಾಗವಹಿಸಿದ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಹಾಗೂ ಯುವನಿಧಿ ಯೋಜನೇಯ ಫಲಾನುಭವಿಗಳು ಈ ನೇರ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೋಳಬೇಕು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 8951460061, 6363330688, ಕ್ಕೆ ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗಾಧಿಕಾರಿಯಾದ ಬಸವಂತ ಪಿ ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಗ್ರಾಹಕರು ಕಳೆದುಕೊಂಡ 1,00,000 ಹಣ ಮರಳಿಸಿದ ಬ್ಯಾಂಕಿನ ಸಿಬ್ಬಂದಿ



**ಬೆಳಗಾವಿ ವಾರ್ತೆ ವಿಜಯಪುರ:** ಇಲ್ಲಿನ ಜಲನಗರ ಎಸ್. ಬಿ. ಐ ಬ್ಯಾಂಕ್ ಶಾಖೆಯಲ್ಲಿ ಗ್ರಾಹಕರೊಬ್ಬರು ಕಳೆದುಕೊಂಡಿದ್ದ 1 ಲಕ್ಷ ಹಣವನ್ನು ಬ್ಯಾಂಕ್ ಸಿಬ್ಬಂದಿ ತಕ್ಷಣವೇ ಪತ್ತೆ ಹಚ್ಚಿ ನೊಂದ ಗ್ರಾಹಕರಿಗೆ ಮರಳಿಸಿ ಪ್ರಶಂಸೆಗೆ ಪಾತ್ರರಾಗಿದ್ದಾರೆ.

ಸಾಮಾನ್ಯ ಬ್ಯಾಂಕಿಂಗ್ ವ್ಯವಹಾರದ ಸಮಯದಲ್ಲಿ, ಗ್ರಾಹಕ ಆಲಮೇಲ ತಾಲೂಕಿನ ತಾವರಖೇಡ ಗ್ರಾಮದ ಪ್ರಗತಿಪರ ರೈತ ಯಲಗೊಂದಿ ಕಣ್ಣಪ್ಪ, ಶಿವನಗೌಡ ತಾವರಖೇಡ ಅವರು ಶಾಖೆಯಿಂದ ಹಿಂಪಡೆಯಲಾದ ಒಂದು ಲಕ್ಷ ಹಣವನ್ನು ಫೇಸಮಾಸ್ಕ್ ಧರಿಸಿದ ಅಪರಿಚಿತ ಮಹಿಳೆಯೊಬ್ಬರು ಕದ್ದಿದ್ದಾರೆ ಎಂದು ದೂರು ನೀಡಿದ್ದರು.

ದೂರು ಸ್ವೀಕರಿಸಿದ ತಕ್ಷಣ, ಶಾಖೆಯು ಸಿಸಿಟಿವಿ ದೃಶ್ಯಾವಳಿಗಳ ವಿವರವಾದ ಪರಿಶೀಲನೆಯನ್ನು ಬ್ಯಾಂಕಿನ ವ್ಯವಸ್ಥಾಪಕ ಪ್ರಕಾಶ್ ಗದಿಗೆಣ್ಣವರ ನೇತೃತ್ವದಲ್ಲಿ ಕೈಗೊಂಡು ಸಿಸಿ ಕ್ಯಾಮೆರಾ ಫುಟೇಜ್ ಪರಿಶೀಲನೆ ನಡೆಸಿದ್ದಾರೆ. ಆಗ ಮಹಿಳೆಯೊಬ್ಬಳು ಹಣ ಲಪಟಾಯಿಸಿರುವುದು ಬೆಳಕಿಗೆ ಬಂದಿದೆ. ಆ ಮಹಿಳೆ ಬ್ಯಾಂಕಿಗೆ ಕೆ ವೈ ಸಿ ಮಾಡಿಸಲು ಬಂದಿದ್ದಳು. ಹಣ ಲಪಟಾಯಿಸುವ ಭರದಲ್ಲಿ ಮಹಿಳೆ ತನ್ನ ಆಧಾರ ಕಾರ್ಡ್ ಮರೆತು ಹೋಗಿದ್ದಳು. ಆಧಾರ ಕಾರ್ಡ್ ನಲ್ಲಿ ಇರುವ ಆ ಮಹಿಳೆಗೆ ಬ್ಯಾಂಕ್ ಸಿಬ್ಬಂದಿ ಫೋನ್ ಮಾಡಿ ಕಳುವು ಮಾಡಿದ ಹಣ ಮರಳಿಸಬೇಕು. ಇಲ್ಲದಿದ್ದರೆ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಬೇಕಾಗುತ್ತದೆ ಎಂದು ಹೇಳಿದ್ದಾರೆ. ಆಗ ಮಹಿಳೆ ತಕ್ಷಣವೇ ಬ್ಯಾಂಕಿಗೆ ಬಂದು ಕಳವು ಮಾಡಿದ ಹಣ ಮರಳಿಸಿದ್ದಾಳೆ.

ಶಾಖೆಯ ಸಿಬ್ಬಂದಿಗಳಾದ ಸಚಿನ್ ಎಸ್. ಕೆ., ಮತ್ತು ಅಮಿತ್ ಚಲವಾದಿ ಅವರ ಸಕ್ರಿಯ ಸಹಾಯದಿಂದ ತನಿಖೆಯನ್ನು ನಡೆಸಲಾಯಿತು.

ಸಿಸಿಟಿವಿ ವಿಶ್ಲೇಷಣೆ ಮತ್ತು ತ್ವರಿತ ಅನುಸರಣಾ ಕ್ರಮದ ಆಧಾರದ ಮೇಲೆ, ಕಳುವಾದ ಒಂದು ಲಕ್ಷ ಮೊತ್ತವನ್ನು ಯಶಸ್ವಿಯಾಗಿ ಪತ್ತೆಹಚ್ಚಿ ಮರುಪಡೆಯಲಾಗಿದೆ. ಸಂಪೂರ್ಣ ಮರುಪಡೆಯಲಾದ ಮೊತ್ತವನ್ನು ನಂತರ ಶಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಶಾಖೆಯ ಆವರಣದಲ್ಲಿ ಗ್ರಾಹಕರಿಗೆ ಹಸ್ತಾಂತರಿಸಲಾಯಿತು.ಕಳೆದುಹೋದ ಮೊತ್ತವನ್ನು ಮರುಪಡೆಯಲು ಮತ್ತು ಹಿಂದಿರುಗಿಸಲು ಶಾಖೆಯ ವ್ಯವಸ್ಥಾಪಕರು ಹಾಗೂ ಸಿಬ್ಬಂದಿ ತೆಗೆದುಕೊಂಡ ತ್ವರಿತ ಕ್ರಮಕ್ಕಾಗಿ ಗ್ರಾಹಕರು ತಮ್ಮ ಕೃತಜ್ಞತೆ ಮತ್ತು ಮೆಚ್ಚುಗೆಯನ್ನು ವ್ಯಕ್ತಪಡಿಸಿದರು.

# ಗಿಡ–ಮರಗಳ ಲಾಲನೆ ಪೋಷಣೆ ಅಗತ್ಯ




**ಬೆಳಗಾವಿ ವಾರ್ತೆ ವಿಜಯಪುರ:** ಇತ್ತೀಚಿನ ದಿನಗಳಲ್ಲಿ ಪರಿಸರ ಮಾಲಿನ್ಯ ಮಾನವನ ಆರೋಗ್ಯದ ಮೇಲೆ ಗಂಭೀರ ಪರಿಣಾಮ ಬೀರುತ್ತಿದ್ದು, ಪರಿಸರ ಸಮತೋಲನ ಕಾಪಾಡಲು ಗಿಡ–ಮರಗಳ ಲಾಲನೆ ಪೋಷಣೆ ಮಾಡುವುದು ತೀರಾ ಅಗತ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷ ಹರೀಶ ಎ. ಹೇಳಿದರು.

ವಿಶ್ವ ಪರಿಸರ ದಿನದ ಅಂಗವಾಗಿ ಕೂಡಗಿ ಎನ್ ಟಿಪಿಸಿ ವಿದ್ಯುತ್ ಸ್ಥಾವರದ ಆವರಣದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಬೃಹತ್ ಸಸಿ ನೆಡುವ ಅಭಿಯಾನಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಪರಿಸರ ಸಂರಕ್ಷಣೆಯ ನಿಟ್ಟಿನಲ್ಲಿ ಅರಣ್ಯ ಇಲಾಖೆಯೊಂದಿಗೆ ಕೈಜೋಡಿಸಿ ಹಸಿರು ವಿಸ್ತರಣೆಗೆ ಎಸ್‌ಟಿಪಿಸಿ ಕೈಗೊಂಡಿರುವ ಕಾರ್ಯವನ್ನು ನ್ಯಾಯಾಧೀಶರು ಪ್ರಶಂಸಿಸಿದ ಅವರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಈ ಮಹತ್ವದ ಅಭಿಯಾನದಲ್ಲಿ ಭಾಗಿಯಾಗಿಸಿರುವುದಕ್ಕೆ ಎಸ್‌ಟಿಪಿಸಿ ಸಂಸ್ಥೆಗೆ ಕೃತಜ್ಞತೆ ಸಲ್ಲಿಸಿದರು.

ಕೂಡಗಿ ಎಸ್‌ಟಿಪಿಸಿ ಯೋಜನೆಯ ಮುಖ್ಯಸ್ಥ ಮಧು ಎಸ್. ಅಧ್ಯಕ್ಷತೆ ವಹಿಸಿ, ಪರಿಸರ ಸಂರಕ್ಷಣೆಯ ಭಾಗವಾಗಿ ಸಂಸ್ಥೆ ಈ ವರ್ಷ ತನ್ನ ವಿದ್ಯುತ್ ಸ್ಥಾವರದ ಆವರಣ ಹಾಗೂ ಸುತ್ತಮುತ್ತಲಿನ ಗ್ರಾಮಗಳಲ್ಲಿ ಒಟ್ಟು 30 ಸಾವಿರ ಸಸಿಗಳನ್ನು ನೆಡುವ ಗುರಿ ಹೊಂದಿದ್ದು, ಅದರ ಅಂಗವಾಗಿ ಈ ಬೃಹತ್ ಅಭಿಯಾನ ಆರಂಭಿಸಲಾಗಿದೆ ಎಂದರು.

ಕಾರ್ಯಕ್ರಮದ ಅಂತ್ಯದಲ್ಲಿ ಅತಿಥಿಗಳು ಮತ್ತು ಅಧಿಕಾರಿಗಳು ಸಸಿ ನೆಟ್ಟು ಪರಿಸರ ಸಂರಕ್ಷಣೆಯ ಸಂಕಲ್ಪ ಕೈಗೊಂಡರು.

ಈ ಅಭಿಯಾನದಿಂದ ಪ್ರದೇಶದಲ್ಲಿ ಹಸಿರು ವಾತಾವರಣ ವೃದ್ಧಿಯಾಗುವುದರ ಜೊತೆಗೆ ಪರಿಸರ ಜಾಗೃತಿಯೂ ಹೆಚ್ಚುವ ನಿರೀಕ್ಷೆ ವ್ಯಕ್ತವಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಎ.ಎಸ್. ಹಾಗರಗಿ, ಕರ್ನಾಟಕ ಅರಣ್ಯ ಇಲಾಖೆಯ ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಹಾಗೂ ಎಸ್‌ಟಿಪಿಸಿ ಸಂಸ್ಥೆಯ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

# ವಿಶ್ವ ಪರಿಸರ ದಿನಾಚರಣೆ



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡದ ಲಿಂಗಾಯತ ವಿದ್ಯಾಭಿವೃದ್ಧಿ ಸಂಸ್ಥೆ ಮತ್ತು ಅದರ ಪ್ರೌಢಶಾಲೆಯ ವತಿಯಿಂದ ವಿಶ್ವ ಪರಿಸರ ದಿನಾಚರಣೆಯನ್ನು ಆಚರಿಸಲಾಯಿತು. ಸಂಸ್ಥೆಯ ಕಾರ್ಯಾಧ್ಯಕ್ಷರಾದ ರಾಜಶೇಖರ ಬೆಳ್ಳಕ್ಕಿ ಸಂಸ್ಥೆಯ ಟೌನಹಾಲ್ ಆವರಣದಲ್ಲಿ ಸಸಿನೆಟ್ಟು ಮಾತನಾಡುತ್ತಾ ಇಂದಿನ ಪರಿಸರವು ಅತೀಯಾದ ಕಾರ್ಬನ ಮತ್ತು ಇತರ ವಿಷಾನಿಲಗಳಿಂದ ತುಂಬಿ ತುಳುಕುತ್ತಿದ್ದು ದೊಡ್ಡದೊಡ್ಡ ನಗರಗಳಲ್ಲಿ ಉಸಿರಾಟಕ್ಕೂ ತೊಂದರೆಯಾಗುತ್ತಿದ್ದು ಅಲ್ಲದೆ ಅಸ್ತಮಾ ರೋಗಿಗಳು ಹೆಚ್ಚುತ್ತಿದ್ದಾರೆ. ಶುದ್ಧ ಗಾಳಿ ಪಡೆಯಬೇಕಾದರೆ ಹೆಚ್ಚು ಹೆಚ್ಚು ಮರಗಳನ್ನು ಬೆಳಸುವುದು ಅತೀ ಅವಶ್ಯವೆಂದರು. ವಿದ್ಯಾರ್ಥಿಗಳಿಗೆ ಪರಿಸರದ ಬಗ್ಗೆ ಹೆಚ್ಚೆಚ್ಚು ತಿಳುವಳಿಕೆ ನೀಡಬೇಕೆಂದರು. ಕಚೇರಿ ಅಧೀಕ್ಷಕರಾದ ಶಿವಲಿಂಗ ನೀಲಗುಂದ ಮಾತನಾಡಿ ಮನುಷ್ಯನಿಗೆ ಗಾಳಿ ಮತ್ತು ನೀರು ಅತ್ಯಂತ ಅವಶ್ಯವಾದ ವಸ್ತುಗಳಾಗಿದ್ದು ಹೆಚ್ಚೆಚ್ಚು ಮರಗಳನ್ನು ಬೆಳೆಯುವುದರಿಂದ ಚೆನ್ನಾಗಿ ಮಳೆಯಾಗಿ ಶುದ್ಧ ಕುಡಿಯುವ ನೀರನ್ನು ಪಡೆಯಬಹುದೆಂದರು. ಪ್ರೌಢಶಾಲೆಯ ಮುಖ್ಯ ಶಿಕ್ಷಕಿಯಾದ ಶ್ರೀಮತಿ ಭುವನೇಶ್ವರಿ ದಂಡಿನ ಮಾತನಾಡಿ ಪ್ರತೀವರ್ಷ ಪರಿಸರ ದಿನದಂದು ಸಂಸ್ಥೆಯ ಆವರಣದಲ್ಲಿ ಮರಗಳನ್ನು ನೆಡುತ್ತಿದ್ದು ಈ ಬಾರಿಯು ಸಾಕಷ್ಟು ಸಸಿಗಳನ್ನು ನೆಡಲಾಗಿದೆ.

ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಶಿಕ್ಷಕೀಯರಾದ ಶ್ರೀಮತಿ. ಸಾವಿತ್ರಿ ಪಾಟೀಲ, ಶ್ರೀಮತಿ ಮಂಜುಳಾ ಬಾವಿಹಾಳ, ಶ್ರೀಮತಿ.ಮಂಜುಳಾ ಹನಸಿ, ಶ್ರೀಮತಿ. ಶಶಿಕಲಾ ಹಿರೇಮಠ, ಕುಮಾರಿ ಅನುಶ್ರೀ ಚವಳಗಿ, ಶಿಕ್ಷಕೇತರ ಸಿಬ್ಬಂದಿಗಳಾದ ಶ್ರೀಮತಿ.ಸುನಿತಾ ಚಿನ್ನದಕೈ, ಶ್ರೀಮತಿ ರೇಣುಕಾ ಹೆಬ್ಬಳ್ಳಿ, ಮಹಾಂತೇಶ ಕ್ವಾಟಿ, ರಾಘವೇಂದ್ರ ಗುಡೆಣ್ಣವರ, ಸೋಮಶೇಖರ ಕರಡಿಗುಡ್ಡ, ಮೃತುಂಜ್ಯಯ ಅಮರಗೋಳ, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಭಾಗವಹಿಸಿದ್ದರು.



ಕರ್ನಾಟಕ ಏಕೀಕರಣದ ಹೋರಾಟಗಾರರು, ನ್ಯಾಯವಾದಿಗಳು, ಮಾಜಿ ಮುಖ್ಯಮಂತ್ರಿ ದಿ. ಎಸ್. ಆರ್. ಬೊಮ್ಮಾಯಿ ರವರ ಜಯಂತೋತ್ಸವದ ಅಂಗವಾಗಿ ಹುಬ್ಬಳ್ಳಿ ತಾಲೂಕ ಹೆಬಸೂರ ಗ್ರಾಮದಲ್ಲಿರುವ ಅವರ ಪ್ರತಿಮೆಗೆ ಬಿಜೆಪಿ ಜಿಲ್ಲಾ ಗ್ರಾಮಾಂತರ ಕಾರ್ಯದರ್ಶಿಗಳಾದ ದೇವರಾಜ್ ಬ. ದಾಡಿಬಾವಿ ಮಾಲಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಅಶೋಕ್ ಮಂಡಿಗನಾಳ, ಎಸ್. ವಿ. ಕೊಣ್ಣೂರ, ಕಲ್ಮೇಶ್ ಉಳ್ಳಾಗಡ್ಡಿ, ಫಕೀರೇಶ ಹಡಪದ, ಬಸವರಾಜ ಹೂಗಾರ, ಸುರೇಶ ಹಡಪದ, ಬಸವರಾಜ ತಳವಾರ, ಬಸವರಾಜ ಕಾಳಿ, ಸಂತೋಷ್ ಕಾಳಿ, ಎಂ. ವೈ ಹುಬ್ಬಳ್ಳಿ, ನಾಗೇಶ್ ಮುದುಗೌಡರ್ ಮತ್ತಿತರರು ಉಪಸ್ಥಿತರಿದ್ದರು.

# ಮುಂಗಾರು ಹಂಗಾಮು ಆರಂಭ: ರಸಗೊಬ್ಬರ ವಿತರಣೆಯಲ್ಲಿ ಅಕ್ರಮ ಸಹಿಸಲಾಗದು

## ಕೃತಕ ಗೊಬ್ಬರ ಅಭಾವ ಸೃಷ್ಟಿಸಿದಲ್ಲಿ ನಿರ್ದಾಕ್ಷಿಣ್ಯ ಕ್ರಮದ ಎಚ್ಚರಿಕೆ: ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್



**ಬೆಳಗಾವಿ ವಾರ್ತೆ ಗದಗ:** ಪ್ರಸಕ್ತ ಸಾಲಿನ ಮುಂಗಾರು ಹಂಗಾಮು ಆರಂಭವಾಗುತ್ತಿದ್ದು, ಯಾವುದೇ ರಸಗೊಬ್ಬರ ಮಾರಾಟಗಾರರು ನಿಗದಿಗಿಂತ ಹೆಚ್ಚಿನ ದರ ವಸೂಲಿ ಮಾಡಿ ದರೆ ಅಥವಾ ಕೃತಕ ಅಭಾವ ಸೃಷ್ಟಿಸಲು ಯತ್ನಿಸಿದರೆ ಅಂತಹವರ ವಿರುದ್ಧ ಕಾನೂ ನು ರೀತ್ಯ ಕಠಿಣ ಕ್ರಮ ಜರುಗಿಸಲಾ ಗುವು ದು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮುಂಗಾರು ಹಂಗಾಮಿನ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ರೈತರು ಕೃಷಿ ಭೂಮಿಯಲ್ಲಿ ರಸಗೊಬ್ಬರಗಳನ್ನು ಅತಿಯಾಗಿ ಬಳಸದೇ ಮಣ್ಣಿನ ಆರೋಗ್ಯ ದೃಷ್ಟಿಯಿಂದ ಅಗತ್ಯಕ್ಕೆ ತಕ್ಕಂತೆ ಬಳಸಬೇಕು. ಇತ್ತೀಚಿನ ದಿನಗಳಲ್ಲಿ ಮಣ್ಣಿನ ಪರೀಕ್ಷೆ ಮಾಡಿಸದೇ ರಸಗೊಬ್ಬರಗಳನ್ನು ವಿಶೇಷವಾಗಿ ಯೂರಿಯಾ ಮತ್ತು ಡಿ.ಎ.ಪಿ ಗೊಬ್ಬರಗಳನ್ನು ಅತಿಯಾಗಿ ಬಳಸುತ್ತಿರುವುದು ಕಂಡುಬರುತ್ತಿದೆ. ಇದರಿಂದ ಮಣ್ಣಿನ ಫಲವತ್ತತೆ ಕ್ಷೀಣಿಸುವುದಲ್ಲದೇ ಅನಗತ್ಯವಾಗಿ ಕೃಷಿ ವೆಚ್ಚವೂ ಹೆಚ್ಚಾಗುತ್ತಿದೆ. ರೈತರು ತಮ್ಮ ಜಮೀನಿನ ಮಣ್ಣು ಪರೀಕ್ಷಾ ವರದಿಯ ಆಧಾರದ ಮೇಲೆ ಕೃಷಿ ಅಧಿಕಾರಿಗಳ ಸಲಹೆಯಂತೆ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿಯೇ ರಸಗೊಬ್ಬರಗಳನ್ನು ನೀಡಬೇಕು. ಕೇವಲ ರಾಸಾಯನಿಕ ಗೊಬ್ಬರಗಳನ್ನೇ ಅವಲಂಬಿಸದೇ ತೇವಾಂಶ ಉಳಿಸಿಕೊಳ್ಳಲು ಮತ್ತು ಮಣ್ಣಿನ ಜೈವಿಕ ಗುಣಮಟ್ಟವನ್ನು ಹೆಚ್ಚಿಸಲು ಕೊಟ್ಟಿಗೆ ಗೊಬ್ಬರ, ಕಾಂಪೋಸ್ಟ್ , ಹಸಿರು ಗೊಬ್ಬರ ಹಾಗೂ ಜೀವಾಮೃತದಂತಹ ನೈಸರ್ಗಿಕ ಪದ್ಧತಿಗಳನ್ನು ಅಳವಡಿಸಿಕೊಳ್ಳಬೇಕು. ಸಾಂಪ್ರದಾಯಿಕ ಮೂಟೆ ಯೂರಿಯಾ ಗೊಬ್ಬರದ ಬದಲಾಗಿ ದ್ರವರೂಪದ ನ್ಯಾನೋ ಯೂರಿಯಾವನ್ನು ಬಳಸುವುದರಿಂದ ಬೆಳೆಗೆ ಸಾರಜನಕದ ಲಭ್ಯತೆ ಹೆಚ್ಚುತ್ತದೆ ಮತ್ತು ಪರಿಸರ ಮಾಲಿನ್ಯವನ್ನು ತಡೆಗಟ್ಟಬಹುದು ಎಂದರು.

ಜಿಲ್ಲೆಯಲ್ಲಿ ಅಗತ್ಯವಿರುವಷ್ಟು ರಸಗೊಬ್ಬರಗಳ ದಾಸ್ತಾನು ಲಭ್ಯವಿದೆ. ರೈತರು ಯಾವುದೇ ಆತಂಕಕ್ಕೆ ಒಳಗಾಗದೇ ಜಾಗರೂಕತೆಯಿಂದ ರಸಗೊಬ್ಬರವನ್ನು ಖರೀದಿಸಿ ಸಮರ್ಪಕವಾಗಿ ಬಳಸಿ ಉತ್ತಮ ಇಳುವರಿ ಪಡೆಯಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ಮಾತನಾಡಿ ಜಿಲ್ಲೆಯಲ್ಲಿ ಜನೆವರಿ 2026 ರಿಂದ ಜೂನ್ 2026 ರವರೆಗೆ ವಾಡಿಕೆ ಮಳೆ 118.9 ಮಿ.ಮೀ ಇದ್ದು , 150.4 ಮಿ.ಮೀ ಮಳೆ ಆಗಿರುತ್ತದೆ. ಹೆಸರು, ಮೆಕ್ಕೆಜೋಳ, ಹತ್ತಿ, ಸರ್ಯಕಾಂತಿ, ಶೇಂಗಾ ಬೆಳೆಗಳು ಮುಂಗಾರು ಹಂಗಾಮಿನ ಪ್ರಮುಖ ಬೆಳೆಗಳಾಗಿವೆ. ಎಲ್ಲ ವರ್ಗದ ರೈತರಿಗೆ ಗರಿಷ್ಠ 2 ಹೆಕ್ಟೇರ್ ಅಥವಾ ಅವರ ಹಿಡುವಳಿ ವಿಸ್ತೀರ್ಣಕ್ಕೆ ಸೀಮಿತಗೊಳಿಸಿ ಬಿತ್ತನೆ ಬೀಜಗಳನ್ನು ರಿಯಾಯತಿ ದರದಲ್ಲಿ ವಿತರಿಸಲಾಗುವುದು.

**ಮುಂಗಾರು ಹಂಗಾಮಿಗೆ ಬಿತ್ತನೆ ಬೀಜದ ವಿವರ :** 2026–27 ನೇ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಬಿತ್ತನೆಯಾಗಬಹುದಾದ 305975 ಹೆಕ್ಟೇರ್ ಪ್ರದೇಶವಿದ್ದು, 67598 ಕ್ವಿಂಟಲ್ ಬಿತ್ತನೆ ಬೀಜದ ( ಅವಶ್ಯಕತೆ ಇದೆ ) ಬೇಕಾಗುತ್ತದೆ. ಬೀಜ ಬದಲಾವಣೆ ಅನುಪಾತದನ್ವಯ 11624 ಕ್ವಿಂಟಲ್ ಬಿತ್ತನೆ ಬೀಜ ಬೇಕಾಗುತ್ತದೆ.

ಜಿಲ್ಲೆಯಲ್ಲಿ 11706 ಕ್ವಿಂಟಲ್ ಬಿತ್ತನೆ ಬೀಜದ ಬೇಡಿಕೆಯಿದ್ದು 11706 ಕ್ವಿಂಟಲ್ ಬಿತ್ತನೆ ಬೀಜ ದಾಸ್ತಾನಿದೆ. 1337.8 ಕ್ವಿಂಟಲ್ ಬೀಜ ವಿತರಣೆಯಾಗಿದ್ದು 10368.2 ಕ್ವಿಂಟಲ್ ಉಳಿಕೆಯಾಗಿದೆ.

ಮುಂಗಾರು ಹಂಗಾಮಿನ ರಸಗೊಬ್ಬರ ವಿವರ : ಜಿಲ್ಲೆಯಲ್ಲಿ 67536 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆ ಇದ್ದು , ಜೂನ್ ಅಂತ್ಯಕ್ಕೆ 32833 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆ ಇರುತ್ತದೆ. ಏಪ್ರಿಲ್ ದಿಂದ ಇಲ್ಲಿಯವರೆಗೆ 21055 ಮೆಟ್ರಿಕ್ ಟನ್ ರಸಗೊಬ್ಬರ ಸರಬರಾಜಾಗಿದ್ದು , ಆರಂಭಿಕ ಶಿಲ್ಕು 16647 ಮೆ.ಟನ್ ಸೇರಿ 37702 ಮೆಟ್ರಿಕ್ ಟನ್ ರಸಗೊಬ್ಬರ ಪೂರೈಕೆಯಿದೆ. ಏಪ್ರಿಲ್ ದಿಂದ ಇಲ್ಲಿಯವರೆಗೆ 23037 ಮೆಟ್ರಿಕ್ ಟನ್ ರಸಗೊಬ್ಬರ ಮಾರಾಟವಾಗಿದೆ.

**ರಸಗೊಬ್ಬರದ ದಾಸ್ತಾನು ವಿವರ:** ಮಾರಾಟ ಮಳಿಗೆಯಲ್ಲಿ 13842 ಮೆಟ್ರಿಕ್ ಟನ್, ಕೆಎಸ್‌ಎಸ್‌ಸಿ – 1533.02 ಮೆಟ್ರಿಕ್ ಟನ್, ಕೆಎಸ್‌ಎಂಎಫ್‌ದಲ್ಲಿ – 951 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕರಾದ ಚೇತನಾ ಪಾಟೀಲ ಸಭೆಗೆ ವಿವರಿಸಿದರು.

ಇದೇ ಸಂದರ್ಭದಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾದ ರಾಷ್ಟ್ರೀಯ ನೈಸರ್ಗಿಕ ಕೃಷಿ ಮಿಷನ್ , ಪ್ರಧಾನ ಮಂತ್ರಿ ಧನ್  ಧಾನ್ಯ ಕೃಷಿ ಯೋಜನೆ, ಆತ್ಮ ಯೋಜನೆಯ 2026–27 ರ ಕ್ರಿಯಾ ಯೋಜನೆ, ದ್ವಿದಳ ಧಾನ್ಯಗಳಲ್ಲಿ ಆತ್ಮ ನಿರ್ಭರತಾ ಅಭಿಯಾನ, ರಾಷ್ಟ್ರೀಯ ಆಹಾರ ಭದ್ರತಾ ಮತ್ತು ಪೌಷ್ಟಿಕ ಅಭಿಯಾನ, ರಾಷ್ಟ್ರೀಯ ಖಾದ್ಯ ತೈಲ ಅಭಿಯಾನ ಯೋಜನೆ ಕುರಿತು ಚರ್ಚಿಸಲಾಯಿತು.

ಸಭೆಯಲ್ಲಿ ಡಿಡಿಎಲ್ ಆರ್ ರುದ್ರಣ್ಣಗೌಡ, ಉಪ ಕೃಷಿ ನಿರ್ದೇಶಕರು, ತಾಲೂಕು ಕಾರ್ಯನಿರ್ವಾಹಕ ಅಧಿಕಾರಿಗಳು, ಸಹಾಯಕ ಕೃಷಿ ನಿರ್ದೇಶಕರುಗಳು, ಆತ್ಮ (ATMA) ಜಿಲ್ಲಾ ಯೋಜನಾ ನಿರ್ದೇಶಕರು, ಎನ್‌ಆರ್‌ಎಲ್‌ಎಂ. ಯೋಜನಾ ನಿರ್ದೇಶಕರು, ರೈತ ಸಂಪರ್ಕ ಕೇಂದ್ರಗಳ ಕೃಷಿ ಅಧಿಕಾರಿಗಳು, ನೈಸರ್ಗಿಕ ಕೃಷಿ ಅಳವಡಿಸಿರುವ ರೈತರು, ಸ್ಥಳೀಯ ನೈಸರ್ಗಿಕ ಕೃಷಿ ಸಂಸ್ಥೆಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಕವಿವಿಯಲ್ಲಿ ಪ್ರಾಧ್ಯಾಪಕನ ಲವ್ವಿಡವ್ವಿ: ತನಿಖಾ ಸಮಿತಿ ರಚನೆ



**ಬೆಳಗಾವಿ ವಾರ್ತೆ ಧಾರವಾಡ:** ಕರ್ನಾಟಕ ವಿಶ್ವವಿದ್ಯಾಲಯದ ಸಸ್ಯಶಾಸ್ತ್ರ ವಿಭಾಗದ ಪ್ರಾಧ್ಯಾಪಕನೋರ್ವ ಅದೇ ವಿಭಾಗದ ಸಂಶೋಧನಾ ವಿದ್ಯಾರ್ಥಿನಿಯೊಂದಿಗೆ ಲವ್ವಿಡವ್ವಿಯಲ್ಲಿ ತೊಡಗಿದ ವಿಷಯ ತನಿಖೆಗೆ ಕುಲಸಚಿವರ ನೇತೃತ್ವದಲ್ಲಿ ತನಿಖಾ ಸಮಿತಿಯನ್ನು ಕುಲಪತಿ ಪ್ರೊ. ಎ.ಎಂ. ಖಾನ್ ರಚಿಸಿದ್ದಾರೆ.

ವಿದ್ಯಾರ್ಥಿಗಳೊಂದಿಗೆ ಪ್ರಾಧ್ಯಾಪಕರ ಈ ರೀತಿಯ ಅನುಚಿತ ವರ್ತನೆಯನ್ನು ಗಂಭೀರವಾಗಿ ಪರಿಗಣಿಸಿರುವ ಕವಿವಿ, ಸಂಶೋಧನಾ ವಿದ್ಯಾರ್ಥಿ ವೇದವ್ಯಾಸ ಚೌವ್ಹಾಣ ನೀಡಿದ ದೂರಿನ ಆಧಾರದ ಮೇಲೆ ಶನಿವಾರ ಮಧ್ಯಾಹ್ನ ಮೊದಲ ಹಂತದ ವಿಚಾರಣೆಯನ್ನೂ ನಡೆಸಿತು. ಆದರೆ, ದೂರು ನೀಡಿದ ವಿದ್ಯಾರ್ಥಿ ಅನ್ಯ ಕೆಲಸದ ನಿಮಿತ್ತ ಊರಿಗೆ ತೆರಳಿದ ಹಿನ್ನೆಲೆಯಲ್ಲಿ ಪುನಃ ವಿಚಾರಣೆಯನ್ನು ಸೋಮವಾರಕ್ಕೆ ಮುಂದೂಡಲಾಗಿದೆ.

ಶನಿವಾರದ ವಿಚಾರಣೆ ಸಂದರ್ಭದಲ್ಲಿ ಲವ್ವಿಡವ್ವಿ ಪ್ರಾಧ್ಯಾಪಕ ಪ್ರೊ. ದೇವರಾಜ ತಂಗುದೊರ್ರೈ ಅವರನ್ನು ಕರೆಯಿಸಲಾಗಿದ್ದು, ಅವರಿಂದಲೂ ಎಲ್ಲಾ ಆಯಾಮಗಳಲ್ಲಿ ವಿವರಣೆಯನ್ನು ಪಡೆಯಲಾಗಿದೆ. ಇದಲ್ಲದೇ ವಿದ್ಯಾರ್ಥಿ ದೂರಿನೊಂದಿಗೆ ಪ್ರಾಧ್ಯಾಪಕ ವಿದ್ಯಾರ್ಥಿನಿಯೊಂದಿಗಿದ್ದ ಭಾವಚಿತ್ರ ಮತ್ತು ಆಕೆಯ ಬಗೆಗೆ ಮಾತನಾಡಿದ ಆಡಿಯೋ ತುಣುಕುಗಳನ್ನು ನೀಡಿದ್ದು, ಅವುಗಳನ್ನು ಪರಿಶೀಲಿಸಲಾಗಿದೆ ಎಂದು ತಿಳಿದು ಬಂದಿದೆ.

ಈ ಕುರಿತು ಮಾತನಾಡಿದ ಕವಿವಿ ಕುಲಪತಿ ಪ್ರೊ. ಎ.ಎಂ. ಖಾನ್, "ಈಗಾಗಲೇ ಕುಲಸಚಿವರ ನೇತೃತ್ವದಲ್ಲಿ ಮೊದಲ ಹಂತದ ವಿಚಾರಣೆ ಶನಿವಾರ ನಡೆಸಲಾಗಿದೆ. ಎರಡು–ಮೂರು ದಿನಗಳಲ್ಲಿಯೇ ವಿಚಾರಣೆಯನ್ನು ಪೂರ್ಣಗೊಳಿಸಿ ಆರೋಪ ಸಾಬೀತಾದರೆ ಮುಂದಿನ ಕ್ರಮವನ್ನು ಕೈಗೊಳ್ಳಲಾಗುವುದು" ಎಂದು ಹೇಳಿದರು.

# ಪ್ರತಿಷ್ಠಿತ ಶಾಲೆಗಳ ಪ್ರವೇಶಕ್ಕೆ ಕೌನ್ಸೆಲಿಂಗ್: ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಮಹತ್ವದ ಹೆಜ್ಜೆ



**ಬೆಳಗಾವಿ ವಾರ್ತೆ ಗದಗ:** 2026–27ನೇ ಶೈಕ್ಷಣಿಕ ಸಾಲಿಗೆ ಪ್ರತಿಷ್ಠಿತ ಶಾಲೆಗಳಿಗೆ ಆಯ್ಕೆಯಾಗಿರುವ ಪರಿಶಿಷ್ಟ ವರ್ಗದ ಬಾಲಕಿಯರಿಗಾಗಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಕೌನ್ಸೆಲಿಂಗ್ ಕಾರ್ಯಕ್ರಮವನ್ನು ಗದಗ ನಗರದ ಡಾ. ಬಿ.ಆರ್. ಅಂಬೇಡ್ಕರ್ ಸಭಾಭವನದಲ್ಲಿ ಯಶಸ್ವಿಯಾಗಿ ಆಯೋಜಿಸಲಾಯಿತು.

ವಿದ್ಯಾರ್ಥಿನಿಯರು ತಮ್ಮ ಆಸಕ್ತಿ, ಸಾಮರ್ಥ್ಯ ಮತ್ತು ಭವಿಷ್ಯದ ಗುರಿಗಳಿಗೆ ಅನುಗುಣವಾಗಿ ಸೂಕ್ತ ಶಾಲೆಯನ್ನು ಆಯ್ಕೆ ಮಾಡಿಕೊಳ್ಳಲು ನೆರವಾಗುವ ಉದ್ದೇಶದಿಂದ ಈ ಕೌನ್ಸೆಲಿಂಗ್ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಶ್ರೀಮತಿ ನಂದಾ ಹಣಬರಟ್ಟಿಯವರು, ಡಯಟ್ ಉಪ ಪ್ರಾಂಶುಪಾಲ ಜಿ.ಎಂ. ಮುಂದಿನಮನಿಯವರು, ಉಪನಿರ್ದೇಶಕರ ಕಚೇರಿಯ ಎಂ.ಎಚ್. ಸವದತ್ತಿಯವರು ಸೇರಿದಂತೆ ವಿವಿಧ ಪ್ರತಿಷ್ಠಿತ ಶಾಲೆಗಳ ಪ್ರಾಂಶುಪಾಲರು ಭಾಗವಹಿಸಿದ್ದರು.

ಗದಗದ ರಾಜರಾಜೇಶ್ವರಿ ಹುಲಕೋಟಿ ಶಾಲೆ, ಮಹಾವೀರ ಜೈನ್ ಶಾಲೆ, ಚಿಕ್ಕಟ್ಟಿ ಶಾಲೆ ಹಾಗೂ ಲಕ್ಷ್ಮೇಶ್ವರದ ಚಂದನ್ ಸ್ಕೂಲ್‌ನ ಪ್ರಾಂಶುಪಾಲರು ವಿದ್ಯಾರ್ಥಿನಿಯರಿಗೆ ತಮ್ಮ ಶಾಲೆಗಳ ಶೈಕ್ಷಣಿಕ ಸೌಲಭ್ಯಗಳು, ವಿಶೇಷ ಕಾರ್ಯಕ್ರಮಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ತರಬೇತಿ, ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಇರುವ ಅವಕಾಶಗಳು ಹಾಗೂ ಉನ್ನತ ಶಿಕ್ಷಣದ ಮಾರ್ಗಗಳ ಕುರಿತು ಮಾಹಿತಿ ನೀಡಿದರು.

ಅಧಿಕಾರಿಗಳು ವಿದ್ಯಾರ್ಥಿಗಳಿಗೆ ಕೇವಲ ಶಾಲೆಯ ಹೆಸರು ಅಥವಾ ಖ್ಯಾತಿಯನ್ನು ಆಧರಿಸಿ ಆಯ್ಕೆ ಮಾಡದೆ, ತಮ್ಮ ಆಸಕ್ತಿ, ಪ್ರತಿಭೆ ಹಾಗೂ ವೃತ್ತಿಜೀವನದ ಕನಸುಗಳಿಗೆ ಹೊಂದಿಕೆಯಾಗುವ ಶಿಕ್ಷಣ ಸಂಸ್ಥೆಯನ್ನು ಆಯ್ಕೆ ಮಾಡಿಕೊಳ್ಳುವಂತೆ ಸಲಹೆ ನೀಡಿದರು. ಉತ್ತಮ ಶಿಕ್ಷಣವು ವ್ಯಕ್ತಿಯ ಭವಿಷ್ಯವನ್ನು ರೂಪಿಸುವ ಪ್ರಮುಖ ಸಾಧನವಾಗಿದ್ದು, ಲಭಿಸಿರುವ ಅವಕಾಶವನ್ನು ಸಮರ್ಪಕವಾಗಿ ಬಳಸಿಕೊಂಡು ಉನ್ನತ ಗುರಿಗಳನ್ನು ಸಾಧಿಸಬೇಕೆಂದು ಕರೆ ನೀಡಿದರು.

ಈ ವೇಳೆ ವಿದ್ಯಾರ್ಥಿನಿಯರು ಹಾಗೂ ಪಾಲಕರು ವಿವಿಧ ಶಾಲೆಗಳ ಬಗ್ಗೆ ತಮ್ಮ ಸಂದೇಹಗಳನ್ನು ಕೇಳಿ ಪರಿಹಾರ ಪಡೆದುಕೊಂಡರು. ಕೌನ್ಸೆಲಿಂಗ್ ಮೂಲಕ ವಿವಿಧ ಶಾಲೆಗಳ ವೈಶಿಷ್ಟ್ಯಗಳು ಮತ್ತು ಲಭ್ಯವಿರುವ ಶೈಕ್ಷಣಿಕ ಅವಕಾಶಗಳ ಬಗ್ಗೆ ಸಮಗ್ರ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯರು ಹೆಚ್ಚು ಆತ್ಮವಿಶ್ವಾಸದಿಂದ ಶಾಲೆ ಆಯ್ಕೆ ಪ್ರಕ್ರಿಯೆಯಲ್ಲಿ ಭಾಗವಹಿಸಿದರು.

ಈ ಕೌನ್ಸೆಲಿಂಗ್ ಕಾರ್ಯಕ್ರಮವು ವಿದ್ಯಾರ್ಥಿನಿಯರ ಶೈಕ್ಷಣಿಕ ಭವಿಷ್ಯಕ್ಕೆ ಸ್ಪಷ್ಟ ದಿಕ್ಕು ನೀಡುವ ಜೊತೆಗೆ, ಅವರಲ್ಲಿ ಉನ್ನತ ಶಿಕ್ಷಣದ ಕನಸುಗಳನ್ನು ಸಾಕಾರಗೊಳಿಸುವ ಉತ್ಸಾಹ ಮತ್ತು ಆತ್ಮವಿಶ್ವಾಸವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಿತು.

ಸಮಾಜದ ಹಿಂದುಳಿದ ವರ್ಗಗಳ ವಿದ್ಯಾರ್ಥಿನಿಯರಿಗೆ ಗುಣಮಟ್ಟದ ಶಿಕ್ಷಣದ ಅವಕಾಶ ಕಲ್ಪಿಸುವ ಸರ್ಕಾರದ ಪ್ರಯತ್ನಕ್ಕೆ ಈ ಕಾರ್ಯಕ್ರಮವು ಮತ್ತಷ್ಟು ಬಲ ತುಂಬಿದಂತಾಯಿತು

# ವಿಷಯಾಧಾರಿತ ತರಬೇತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ವಿಜಯಪುರ:** ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ವತಿಯಿಂದ ವಿಜಯಪುರ ಜಿಲ್ಲೆಯಲ್ಲಿ ದಾವಾ ದಾಖಲಾತಿ ಮತ್ತು ಲೆಕ್ಕ ಪತ್ರಗಳ ಅಂತಿಮಗೊಳಿಸುವಿಕೆ ಕುರಿತು ವಿಷಯಾಧಾರಿತ ತರಬೇತಿ ಕಾರ್ಯಕ್ರಮವನ್ನು ನಗರದ ಸೊಲ್ಲಾಪುರ ರಸ್ತೆ ಶಾಂತೇಶ್ವರ ಸಹಕಾರ ಸಂಘದ ಕಟ್ಟಡದಲ್ಲಿ ಆಯೋಜನೆ ಮಾಡಲಾಗಿತ್ತು.

ಬೆಳಗಾವಿಯ ಚಾರ್ಟರ್ಡ್ ಅಕೌಂಟೆಂಟ್ ಮಹಾಂತೇಶ ಹೊಸಪೇಟೆ ಹಾಗೂ ರಾಚಯ್ಯ ಹಿರೇಮಠ ಅವರು ಮಾಹಿತಿ ನೀಡಿದರು. ಅಮರನಾಥ ಬಿರಾದಾರ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಧ್ಯಕ್ಷತೆಯನ್ನು ವಹಿಸಿದ್ದ ಸೌಹಾರ್ದ ಸಂಯುಕ್ತ ಸಹಕಾರಿ ನಿರ್ದೇಶಕ ಸಂಜಯ ಪಾಟೀಲ ಕನಮಡಿ ಅವರು, ಸೌಹಾರ್ದ ಸಂಘಗಳ ಕಾರ್ಯವೈಖರಿ , ಬದ್ಧತೆ , ಜವಾಬ್ದಾರಿಗಳ ಕುರಿತು ತಿಳಿಸಿದರು. ಮುಖ್ಯ ಅತಿಥಿಗಳಾಗಿ ಸಹಕಾರ ಭಾರತಿ ಜಿಲ್ಲಾ ಸಂಘಟನಾ ಕಾರ್ಯದರ್ಶಿ ದೀಪಕ ಶಿಂತ್ರೆ, ಸೌಹಾರ್ದ ಸಂಯುಕ್ತ ಸಹಕಾರಿ ಜಿಲ್ಲೆಯ ಅಧಿಕಾರಿ ಬಸವರಾಜ ಸ್ವಾಗತಿಸಿದರು. ಪ್ರತಿಭಾ ಮಠ ನಿರೂಪಿಸಿದರು.

ಈ ಅರ್ಥಪೂರ್ಣ ತರಬೇತಿಯಲ್ಲಿ ವಿಜಯಪುರ ಜಿಲ್ಲೆಯ ಸೌಹಾರ್ದ ಸಹಕಾರಿಗಳ ಮುಖ್ಯ ಕಾರ್ಯ ನಿರ್ವಾಹಕರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ವಿಜಯಪುರ:** ನಗರದ ಚಿದಂಬರೇಶ್ವರ ದೇವಸ್ಥಾನ ಹತ್ತಿರ ವಿಶ್ವ ಪರಿಸರ ದಿನ ಅಂಗವಾಗಿ ಸಸಿಗಳನ್ನು ನೆಟ್ಟು ಪರಿಸರ ಜಾಗೃತಿಯ ಸಂದೇಶ ಸಾರಲಾಯಿತು.

# ವಿಶ್ವ ಪರಿಸರ ದಿನಾಚರಣೆ

ಚಿದಂಬರ ಸೇವಾ ಸಮಿತಿಯ ಅಧ್ಯಕ್ಷ ಲಕ್ಷ್ಮೀಕಾಂತ ಕುಲಕರ್ಣಿ ಮಾತನಾಡಿ, ಪರಿಸರ ರಕ್ಷಿತ: ರಕ್ಷತ: ಎನ್ನುವಂತೆ ಪರಿಸರವನ್ನು ನಾವು ರಕ್ಷಿಸಿದರೆ, ಅದು ನಮ್ಮನ್ನು ರಕ್ಷಿಸುತ್ತದೆ. ಪರಿಸರ ನಮಗೆ ಪ್ರಾಣವಾಯು, ಆಹಾರ ಎಲ್ಲವೂ ನೀಡಿದೆ, ಆದರೆ ನಾವು ಪ್ರತಿಯಾಗಿ ಪರಿಸರವನ್ನು ವಿನಾಶ ಮಾಡುತ್ತಿದ್ದೇವೆ. ಮಾಲಿನ್ಯಗೊಳಿಸುತ್ತಿದ್ದೇವೆ. ಹೀಗಾಗಿ ಪರಿಸರ ರಕ್ಷಣೆ ನಮ್ಮ ಜೀವನದ ಭಾಗವಾಗಬೇಕು ಎಂದರು.

ಯುವ ಧುರೀಣ ಪ್ರಕಾಶ ಅಕ್ಕಲಕೋಟ ಮಾತನಾಡಿ, ಪರಿಸರ ರಕ್ಷಣೆ ಕೇವಲ ಒಂದು ದಿನದ ಆಚರಣೆಯಾಗಬಾರದು. ಅನುದಿನವೂ ಪರಿಸರ ರಕ್ಷಣೆ ಬದ್ಧತೆಯಿಂದ ಮಾಡೋಣ ಎಂದರು. ವೇದಮೂರ್ತಿ ಶಂಕರ ಭಟ್ ಅಗ್ನಿ ಹೋತ್ರಿ, ಮಹಾಲಕ್ಷ್ಮಿ ಬ್ಯಾಂಕ್ ನಿರ್ದೇಶಕ ವಿಜಯ ಜೋಶಿ, ಜೋಶಿ ಉದ್ಯಮ ಸಮೂಹದ ಮುಖ್ಯಸ್ಥ ಗೋವಿಂದ ಜೋಶಿ, ದತ್ತಾತ್ರೇಯ ಜೋಶಿ, ಕಾನಿಪ ಜಿಲ್ಲಾ ಕಾರ್ಯಕಾರಿಣಿ ಸದಸ್ಯರಾದ ಸುಧೀಂದ್ರ ಕುಲಕರ್ಣಿ, ಚಿದಂಬರ ಸೇವಾ ಸಮಿತಿಯ ಕಾರ್ಯದರ್ಶಿ ವೆಂಕಟೇಶ ಜೋಶಿ ನಂದವಾಡಗಿ, ದತ್ತಾತ್ರೇಯ ಜೋಶಿ, ಪ್ರಶಾಂತರಾವ್, ವೆಂಕಟೇಶ ಗುಡಿ, ಗೋವಿಂದ ದೇಶಪಾಂಡೆ, ಶ್ರೀನಿಧಿ ಜೋಶಿ, ಸದಾಶಿವ ಬಾವಿಕಟ್ಟಿ, ವೆಂಕಟೇಶ ಜೋಶಿ ಪಾಲ್ಗೊಂಡಿದ್ದರು.

# ಪಂಡಲೀಕ ಮುರಾಳ ಅವರಿಗೆ 'ಮಾಧ್ಯಮ ರತ್ನ ಸಿರಿ ಪ್ರಶಸ್ತಿ'



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಇಲ್ಲಿನ 'ಧರ್ಮ ಯುದ್ಧ' ದಿನಪತ್ರಿಕೆಯ ಕ್ಷೇತ್ರ ಮಾಧ್ಯಮ ಪ್ರತಿನಿಧಿ ಪಂಡಲೀಕ ಯ. ಮುರಾಳ ಅವರಿಗೆ ಪ್ರಸಕ್ತ ಸಾಲಿನ ಪ್ರತಿಷ್ಠಿತ 'ರಾಜ್ಯಮ ಟ್ಟದ ಮಾಧ್ಯಮ ರತ್ನ ಸಿರಿ ಪ್ರಶಸ್ತಿ' ಘೋಷಣೆಯಾಗಿದೆ.

ತಾಳಿಕೋಟಿಯ ಶ್ರೀ ವಿರಕ್ತೇಶ್ವರ ಭರತನಾಟ್ಯ ತರಬೇತಿ ಸಂಸ್ಥೆಯು ತನ್ನ 7ನೇ ವಾರ್ಷಿಕೋತ್ಸವದ ಅಂಗವಾಗಿ ಮಾಧ್ಯಮ ಕ್ಷೇತ್ರದ ಸಾಧನೆಯನ್ನು ಗುರುತಿಸಿ ಈ ಪ್ರಶಸ್ತಿಯನ್ನು ಪ್ರಕಟಿಸಿದೆ. ಜೂನ್ 7ರಂದು ತಾಳಿಕೋಟಿಯ ಶ್ರೀ ಖಾಸ್ಗತೇಶ್ವರ ಸಭಾಭವನದಲ್ಲಿ ನಡೆಯಲಿರುವ ಸಾಂಸ್ಕೃತಿಕ ನಾಟ್ಯ ವೈಭವ ಕಾರ್ಯಕ್ರಮದಲ್ಲಿ ನಾಡಿನ ಪೂಜ್ಯರು ಹಾಗೂ ಗಣ್ಯರ ಸಮ್ಮುಖದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ಸಂಸ್ಥೆಯ ಅಧ್ಯಕ್ಷ ವಿ.ಪಿ. ಚಿಕ್ಕಮಠ ತಿಳಿಸಿದ್ದಾರೆ. ಮುರಾಳ ಅವರಿಗೆ ಪ್ರಶಸ್ತಿ ಲಭಿಸಿದ್ದಕ್ಕೆ ತಾಲ್ಲೂಕಿನ ಪತ್ರಕರ್ತರು ಹರ್ಷ ವ್ಯಕ್ತಪಡಿಸಿದ್ದಾರೆ.

# ನೂತನ ಕೆಪಿಸಿಸಿ ಅಧ್ಯಕ್ಷರಿಗೆ ಅಭಿನಂದಿಸಿದ ಶಾಸಕ ನಾರಾ ಭರತ್ ರೆಡ್ಡಿ



**ಬೆಳಗಾವಿ ವಾರ್ತೆ ಬೆಂಗಳೂರು/ಬಳ್ಳಾರಿ:** ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ (ಕೆಪಿಸಿಸಿ) ಅಧ್ಯಕ್ಷರಾಗಿ ನೇಮಕಗೊಂಡ ಬಿ.ಕೆ. ಹರಿಪ್ರಸಾದ್ ಅವರನ್ನು ಬಳ್ಳಾರಿ ನಗರ ಶಾಸಕ ನಾರಾ ಭರತ್ ಅಭಿನಂದಿಸಿ, ಶುಭ ಹಾರೈಸಿದ್ದಾರೆ.

ಈ ಸಂದರ್ಭ ಬಳ್ಳಾರಿ ಜಿಲ್ಲೆಯ ಭವಿಷ್ಯದ ರಾಜಕೀಯ ಕಾರ್ಯತಂತ್ರಗಳ ಬಗ್ಗೆ ಚರ್ಚಿಸಲಾಯಿತು ಎಂದು ಅವರು ತಿಳಿಸಿದ್ದಾರೆ.

ಹೊಸದಾಗಿ ನೇಮಕಗೊಂಡ ಕೆಪಿಸಿಸಿ ಅಧ್ಯಕ್ಷರಾದ ಬಿ.ಕೆ. ಹರಿಪ್ರಸಾದ್ ಅವರಿಗೆ ಹೃದಯಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು ಮತ್ತು ಅವರ ನಾಯಕತ್ವದಲ್ಲಿ ಕರ್ನಾಟಕ ಕಾಂಗ್ರೆಸ್ ಪಕ್ಷವು ಇನ್ನಷ್ಟು ಬಲಪಡುತ್ತದೆ ಮತ್ತು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ, ವಿಶೇಷವಾಗಿ ಬಳ್ಳಾರಿ ಜಿಲ್ಲೆಯಲ್ಲಿ ಅಭಿವೃದ್ಧಿ ಮತ್ತು ಜನಸೇವೆಯ ಹೊಸ ಅಧ್ಯಾಯ ಆರಂಭವಾಗುತ್ತದೆ ಎಂಬ ವಿಶ್ವಾಸವನ್ನು ಶಾಸಕ ನಾರಾ ಭರತ್ ರೆಡ್ಡಿ ವ್ಯಕ್ತಪಡಿಸಿದ್ದಾರೆ.

ಭೇಟಿ ವೇಳೆ ಬಳ್ಳಾರಿ ಜಿಲ್ಲೆಯ ರಾಜಕೀಯ ಪರಿಸ್ಥಿತಿ, ಪಕ್ಷದ ಸಂಘಟನಾತ್ಮಕ ಬಲವರ್ಧನೆ, ಅಭಿವೃದ್ಧಿ ಯೋಜನೆಗಳು ಮತ್ತು ಭವಿಷ್ಯದ ಕಾರ್ಯಯೋಜನೆಗಳ ಬಗ್ಗೆ ವಿವರವಾದ ಚರ್ಚೆ ನಡೆಯಿತು. ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಇನ್ನಷ್ಟು ಸಬಲಗೊಳಿಸುವುದು ಮತ್ತು ಜನಪ್ರತಿನಿಧಿಗಳು ಮತ್ತು ಕಾರ್ಯಕರ್ತರ ನಡುವಿನ ಸಂಬಂಧವನ್ನು ಗಟ್ಟಿಗೊಳಿಸುವುದು ಈ ಚರ್ಚೆಯ ಮುಖ್ಯ ಅಂಶಗಳಾಗಿದ್ದವು ಎಂದು ಶಾಸಕರು ತಿಳಿಸಿದ್ದಾರೆ.

ಬಿ.ಕೆ. ಹರಿಪ್ರಸಾದ್ ಅವರ ಅನುಭವ ಮತ್ತು ನಾಯಕತ್ವವು ಪಕ್ಷಕ್ಕೆ ಮಾರ್ಗದರ್ಶನವಾಗುತ್ತದೆ ಎಂದು ನನ್ನ ಭಾವನೆ, ಅವರ ಯಶಸ್ವಿ ನಾಯಕತ್ವಕ್ಕೆ ಶುಭಕಾಮನೆ ಸಲ್ಲಿಸಿದೆ ಎಂದು ಶಾಸಕ ನಾರಾ ಭರತ್ ರೆಡ್ಡಿ ಹೇಳಿದ್ದಾರೆ.

# ಬಳ್ಳಾರಿಯಲ್ಲಿ ಬ್ಯಾಂಕ್ ಸಿಬ್ಬಂದಿ ಫಾತಿಮಾ ಅನುಮಾನಾಸ್ಪದ ಸಾವು! ಹಲವು ಪ್ರಶ್ನೆಗಳಿಗೆ ತನಿಖೆಯಲ್ಲೇ ಉತ್ತರ

**ಬೆಳಗಾವಿ ವಾರ್ತೆ ಬಳ್ಳಾರಿ:** ನಗರದ ಡಿ.ಸಿ. ಕ್ಯಾಂಪ್ ರಸ್ತೆ ಸಮೀಪದ ಆಂದ್ರಾಳ್ ಹಳ್ಳದಲ್ಲಿ ಕರ್ನಾಟಕ ಗ್ರಾಮೀಣ ಬ್ಯಾಂಕ್ ಸಿಬ್ಬಂದಿ ಹನೀಫ್ ಫಾತಿಮಾ ಅವರ ಮೃತದೇಹ ಪತ್ತೆಯಾಗಿರುವುದು ನಗರದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ನಿನ್ನೆ ರಾತ್ರಿ ಸಹೋದ್ಯೋಗಿಗಳೊಂದಿಗೆ ಊಟ ಮುಗಿಸಿ ಮನೆಗೆ ತೆರಳಿದ್ದ ಫಾತಿಮಾ ಅವರು ಇಂದು ಬೆಳಿಗ್ಗೆ ಅನುಮಾನಾಸ್ಪದ ಸ್ಥಿತಿಯಲ್ಲಿ ಮೃತರಾಗಿರುವುದು ಹಲವು ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಭಾರಿ ಮಳೆಯ ನಡುವೆಯೇ ಅವರು ಹೇಗೆ ಆಂದ್ರಾಳ್ ಹಳ್ಳದ ಪ್ರದೇಶಕ್ಕೆ ತಲುಪಿದರು ಎಂಬುದು ನಿಗೂಢವಾಗಿದೆ.

ಪ್ರಕರಣದ ಕುರಿತು ಪೊಲೀಸರು ಎಲ್ಲಾ ಆಯಾಮಗಳಲ್ಲಿ ತನಿಖೆ ಆರಂಭಿಸಿದ್ದು, ಸಿಸಿಟಿವಿ ದೃಶ್ಯಗಳು ಸೇರಿದಂತೆ ವಿವಿಧ ಸಾಕ್ಷ್ಯಾಧಾರಗಳನ್ನು ಪರಿಶೀಲಿಸುತ್ತಿದ್ದಾರೆ. ಮರಣೋತ್ತರ ಪರೀಕ್ಷೆಯ ವರದಿ ಬಂದ ಬಳಿಕ ಸಾವಿನ ನಿಖರ ಕಾರಣ ತಿಳಿಯುವ ನಿರೀಕ್ಷೆಯಿದೆ.

# ಮಳೆಗೆ ಮತ್ತೆ ಉರುಳಿದವು ಮರಗಳು ರಾತ್ರಿಯಲ್ಲಾ ಕರೆಂಟ್ ಇಲ್ಲ

**ಬೆಳಗಾವಿ ವಾರ್ತೆ ಬಳ್ಳಾರಿ:** ಮತ್ತೆ ನಿನ್ನೆ ರಾತ್ರಿ ಬಿದ್ದ ಭಾರಿ ಮಳೆ ಗಾಳಿ ಬೀಸಿದಾಗ ಗಿಡ ಮರಗಳು ಉರುಳಿವೆ. ತಗ್ಗು ಪ್ರದೇಶಗಳಲ್ಲಿ ನೀರು ನುಗ್ಗಿವೆ. ನಗರದ ವಿದ್ಯುತ್ ಸ್ಥಾವರಕ್ಕೂ ನೀರು ನುಗ್ಗಿರುವುದರಿಂದ ರಾತ್ರಿಯಿಂದ ವಿದ್ಯುತ್ ಸರಬರಾಜು ಸ್ಥಗಿತಗೊಂಡಿತ್ತು.

ಮಳೆಯಿಂದಾಗಿ ನಗರದ ಉತ್ತರ ಭಾಗದ 110/11 ಕೆವಿ ವಿದ್ಯುತ್ ವಿತರಣೆಯ ಉಪ ಕೇಂದ್ರದ ಹೆಚ್.ಟಿ. ಪ್ಯಾನೆಲ್ಗಳಿಗೆ ನೀರು ನುಗ್ಗಿದ್ದು, ಸುರಕ್ಷತಾ ಕಾರಣಗಳಿಂದ ಎಲ್ಲಾ 18 ಫೀಡರ್ಗಳನ್ನು ರಾತ್ರಿಯಿಂದ ಸ್ಥಗಿತಗೊಳಿಸಿತ್ತು.

ಇದರಿಂದಾಗಿ ಪಾರ್ವತಿ ನಗರ, ತಾಳೂರು ರಸ್ತೆ, ಕಪ್ಪಗಲ್ ರಸ್ತೆ, ಸತ್ಯನಾರಾಯಣ ಪೇಟೆ, ಬ್ಯಾಂಕರ್ಸ್ ಕಾಲೋನಿ, ರಾಘವೇಂದ್ರ ಕಾಲೋನಿ, ಹನುಮಾನ್ ನಗರ, ವಿಶಾಲ್ ನಗರ, ಕೆ.ಸಿ. ರಸ್ತೆ, ವಡ್ಡರಬಂಡೆ, ಡಿ.ಸಿ. ಬಂಗ್ಲಾ, ಶ್ರೀರಾಮಪುರ ಕಾಲೋನಿ, ಡಿ.ಎ.ಆರ್. ಕ್ವಾರ್ಟರ್ಸ್, ರಾಯಲ್ ಕಾಲೋನಿ, ಎಸ್.ಪಿ. ಸರ್ಕಲ್, ಗಾಂಧಿನಗರ, ಮೋಕಾ ರಸ್ತೆ, ಬಸವೇಶ್ವರ ನಗರ, ಸಿದ್ಧಾರ್ಥ ಕಾಲೋನಿ, ಶಾಸ್ತ್ರಿ ನಗರ, ದೇವಿ ನಗರ, ಹರಿಪ್ರಿಯಾ ಲೇಔಟ್, ಬಸವನಕುಂಟೆ, ಅಗಡಿಮಾರೇಪ್ಪ ಕಾಂಪೌಂಡ್, ನಲಗಡ್ಡ ಹಾಗೂ ಗ್ಲಾಸ್ ಬಜಾರ್ ಸೇರಿದಂತೆ ವಿವಿಧ ಪ್ರದೇಶಗಳಲ್ಲಿ ವಿದ್ಯುತ್ ಸರಬರಾಜು ಸ್ಥಗಿತಗೊಂಡಿತ್ತು.

ನಗರದ ಪಾಲಿಕೆಯ ನಗರಸಭೆಯ ಹಳೇ ಕಟ್ಟಡದ ಬಳಿ ಮರವೊಂದು ಉರುಳಿಬಿದ್ದು ಅದರ ಕಾಂಪೌಂಡ್ ಗೋಡೆ ಕುಸಿದಿದೆ. ಇದೇ ರೀತಿ ನಗರದ ಹಲವಡೆ ಮರಗಳು ಉರುಳಿ ಬಿದ್ದಿವೆ.

ಸೆಲ್ಲರ್ ಹೊಂದಿರುವ ಕಟ್ಟಡಗಳಿಗೆ. ತಗ್ಗು ಪ್ರದೇಶದ ಮನೆ ಮತ್ತು ಗುಡಿಸಲುಗಳಿಗೆ ನೀರು ನುಗ್ಗಿ ಜನರು ಶಿವರಾತ್ರಿ ಆಚರಿಸುವಂತಾಯಿತ್ತು.



ಒಳಚರಂಡಿ ಸಮೀಪದ ಪ್ರದೇಶಗಳಲ್ಲಿ ಮಳೆ ನೀರು ರಸ್ತೆ ಮೇಲೆ ಹರಿದಿದೆ.ಒಳಚರಂಡಿಗಳು ತುಂಬಿ ಹರಿದ ಕಾರಣ ಮನೆಗಳ ನೀರು ನುಗ್ಗಿ ಗೃಹೋಪಯೋಗಿ ವಸ್ತುಗಳಿಗೆ ಹಾನಿಯಾಗಿದೆ. ನಿವಾಸಿಗಳು ನೀರನ್ನು ಹೊರಹಾಕಲು ಹರಸಾಹಸ ಪಟ್ಟಿದ್ದಾರೆ.

ಬಿಎಂಸಿಅಸರ್ ಸಿ(ವಿಮ್ಸ್) ಅಸ್ಪತ್ರೆಯೊಳಗೂ ಮಳೆ ನೀರು ನುಗ್ಗಿದೆ. ಜೋರಾದ ಮಳೆ ಪರಿಣಾಮ ಕಿಟಕಿ ಮತ್ತು ಆಸ್ಪತ್ರೆ ಮಧ್ಯೆ ಇರೋ ತೆರದ ಪ್ರದೇಶದಿಂದ ನೀರು ಬಂದಿದೆ. ರಾತ್ರಿ ರೋಗಿಗಳು ಮತ್ತು ಅವರ ಸಂಬಂಧಿಕರ ಪರದಾಡುವಂತಾಗಿದೆ ರಾತ್ರಿಯಲ್ಲ ನೀರನ್ನು ಹೊರ ಹಾಕಿದ್ದಾರೆ ಆಸ್ಪತ್ರೆ ಸಿಬ್ಬಂದಿ. ಮಳೆ ನೀರು ಬಂದಾಗ ಹೊರ ಹೋಗಲು ಸೂಕ್ತ ವ್ಯವಸ್ಥೆ ಮಾಡಲು ಜನ ಆಗ್ರಹಿಸಿದ್ದಾರೆ.

# ಹಸಿರು ನಮ್ಮೆಲ್ಲರ ಉಸಿರು, ಮರಗಳನ್ನು ಬೆಳೆಸಿ ಪರಿಸರ ಉಳಿಸಲು ಕರೆ



**ಬೆಳಗಾವಿ ವಾರ್ತೆ ಬಳ್ಳಾರಿ:** ಪರಿಸರ ಮಾಲಿನ್ಯ, ಜಾಗತಿಕ ತಾಪಮಾನ ಏರಿಕೆ ಮತ್ತು ನೈಸರ್ಗಿಕ ಸಂಪನ್ಮೂಲಗಳ ನಾಶದಂತ ಹ ಗಂಭೀರ ಸಮಸ್ಯೆಗಳ ವಿರುದ್ಧ ಹೋರಾಡುವುದು ಇಂದಿನ ತುರ್ತು ಅಗತ್ಯವಾಗಿದೆ. ಕಾಡಿನ ಹಸಿರು ನಮ್ಮೆಲ್ಲ ರ ಉಸಿರಾಗಿದ್ದು, ಪ್ರತಿಯೊಬ್ಬರೂ ಮರಗಳನ್ನು ಬೆಳೆಸುವ ಮೂಲಕ ಭೂ ಮಿಯ ತಾಪಮಾನವನ್ನು ಇಳಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟು ಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಕರೆ ನೀಡಿದರು.

ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಚೇರಿ ಆವರಣದಲ್ಲಿ 'ವಿಶ್ವ ಪರಿಸರ ದಿನಾಚರಣೆ' ಅಂಗವಾಗಿ ಶನಿವಾರ ಸಸಿ ನೆಟ್ಟು ಬಳಿಕ ಅವರು ಮಾತನಾಡಿದರು.

ಪ್ರತಿವರ್ಷ ಜೂನ್ 5 ರಂದು ವಿಶ್ವ ಪರಿಸರ ದಿನವನ್ನು ಆಚರಿಸಲಾಗುತ್ತಿದ್ದು, ಗಾಳಿ, ನೀರು, ಮಣ್ಣು ಮತ್ತು ಜೀವ ವೈವಿಧ್ಯತೆಯ ಪ್ರಾಮುಖ್ಯತೆಯನ್ನು ಜನರಿಗೆ ಅರ್ಥೈಸಲು ಇದು ಪ್ರಮುಖ ವೇದಿಕೆಯಾಗಿದೆ ಎಂದು ತಿಳಿಸಿದರು.

ಪರಿಸರ ಸಂರಕ್ಷಣೆಗಾಗಿ ಮರಗಳನ್ನು ಬೆಳೆಸುವುದು, ಪ್ಲಾಸ್ಟಿಕ್ ಬಳಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವುದು ಮತ್ತು ನೈಸರ್ಗಿಕ ಸಂಪನ್ಮೂಲಗಳನ್ನು ಮಿತವಾಗಿ ಬಳಸಿ, ಮರುಬಳಕೆ ಮಾಡಲು ಸಾರ್ವಜನಿಕರು ಪ್ರೇರೇಪಿತರಾಗಬೇಕು ಎಂದರು.

'ಕಸದಲ್ಲಿ ರಸ ಎನ್ನುವಂತೆ' ನಮ್ಮ ಸುತ್ತಮುತ್ತಲಿನ ತ್ಯಾಜ್ಯ ವಸ್ತುಗಳನ್ನು ಸಮರ್ಪಕವಾಗಿ ಬಳಸಿಕೊಂಡು ಪರಿಸರ ಸಂರಕ್ಷಣೆ ಮಾಡಬೇಕು ಹಾಗೂ ಭೂಮಾಲಿನ್ಯವನ್ನು ತಡೆಗಟ್ಟಬೇಕು. ನಮ್ಮ ಸುತ್ತಮುತ್ತಲಿನ ವಾತಾವರಣವನ್ನು ಸ್ವಚ್ಛವಾಗಿಟ್ಟುಕೊಂಡರೆ ಸಾಂಕ್ರಾಮಿಕ ರೋಗಗಳು ಹರಡುವುದನ್ನು ತಡೆಗಟ್ಟಬಹುದು. ಮುಂದಿನ ಪೀಳಿಗೆಗೆ ಸ್ವಚ್ಛ ಮತ್ತು ಹಸಿರು ಭೂಮಿಯನ್ನು ಕೊಡುಗೆಯಾಗಿ ನೀಡಲು ಸುಸ್ಥಿರ ಅಭ್ಯಾಸಗಳನ್ನು ಅಳವಡಿಸಿಕೊಳ್ಳುವುದು ಅತ್ಯಗತ್ಯ. ಅರಣ್ಯವಿಲ್ಲದೆ ಮಳೆಯಿಲ್ಲ, ಮಳೆಯಿಲ್ಲದೆ ಬೆಳೆಯಿಲ್ಲ ಎಂದು ಅವರು ವಿವರಿಸಿದರು.

ಕಾರ್ಯಕ್ರಮದಲ್ಲಿ ಪರಿಸರ ಸಂರಕ್ಷಣೆಯ ಸಂಕಲ್ಪ ತೊಟ್ಟು ಗಣ್ಯರು ಸಸಿಗಳನ್ನು ನೆಟ್ಟರು.

ಈ ಸಂದರ್ಭದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್. ಬಸರೆಡ್ಡಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಆರ್. ಅಬ್ದುಲ್ಲಾ, ಜಿಲ್ಲಾ ಕುಷ್ಠರೋಗ ನಿರ್ಮೂಲನಾ ಅಧಿಕಾರಿ ಡಾ.ವೀರೇಂದ್ರ ಕುಮಾರ್, ಸಹಾಯಕ ಆಡಳಿತ ಅಧಿಕಾರಿ ನವೀನ್ ಕುಮಾರ್, ವೈದ್ಯಾಧಿಕಾರಿಗಳಾದ ಡಾ. ನರಸಿಂಹ ಮೂರ್ತಿ, ಡಾ. ಭಾರತಿ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೇಣುಕ ಜಡಗಣ್ಣನವರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್, ಪ್ರಥಮ ದರ್ಜೆ ಸಹಾಯಕ ಕೃಷ್ಣನಾಯ್ಕ ಸೇರಿದಂತೆ ಇಲಾಖೆಯ ಇತರೆ ಸಿಬ್ಬಂದಿಗಳು ಇದ್ದರು.

# ಬಿದರಕುಂದಿ ಟ್ರೀ ಪಾರ್ಕ್‌ನಲ್ಲಿ ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ನಮಗೆ ಆರೋಗ್ಯ, ಶಾಂತಿ, ನೆಮ್ಮದಿ ಹೀಗೆ ಎಲ್ಲವನ್ನೂ ಕೊಡುವ ಪರಿಸರವನ್ನು ರಕ್ಷಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಪ್ರತಿಯೊಬ್ಬರೂ ಪರಿಸರವನ್ನು ಉಳಿಸಿ, ಬೆಳೆಸಲು ಕೈ ಜೋಡಿಸಬೇಕು ಎಂದು ಇಲ್ಲಿನ 5ನೇ ಹೆಚ್ಚುವರಿ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವೆಗಳ ಸಮಿತಿ ಅಧ್ಯಕ್ಷರಾದ ಸಚಿನ್ ಕೌಶಿಕ್ ಆರ್.ಎನ್. ಅವರು ಕರೆ ನೀಡಿದರು. ತಾಲೂಕಿನ ಬಿದರಕುಂದಿ ಟ್ರೀ ಪಾರ್ಕ್ ನಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ, ಸಸಿ ನೆಟ್ಟು ನೀರೆರೆಯುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು. ಈ ಕಾರ್ಯಕ್ರಮವನ್ನು ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ಅರಣ್ಯ ಇಲಾಖೆ ಹಾಗೂ ಎಲ್ಲ ಸರ್ಕಾರಿ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಏರ್ಪಡಿಸಲಾಗಿತ್ತು.

ಗಿಡ ನೆಡುವುದಕ್ಕೂ ಮುನ್ನ ಪರಮಾನಂದ ಪಾಟೀಲ ಅವರು ಶಾಸ್ತ್ರೋಕ್ತವಾಗಿ ಪೂಜೆ ನೆರವೇರಿಸಿ ಪರಿಸರದ ಮಹತ್ವವನ್ನು ಸಾರಿದರು. ಇದೇ ಸಂದರ್ಭದಲ್ಲಿ ನ್ಯಾಯಾಧೀಶರಾದಿಯಾಗಿ ಆಗಮಿಸಿದ ಎಲ್ಲ ಗಣ್ಯರು ಟ್ರೀ ಪಾರ್ಕ್ ನಲ್ಲಿ ಸಂಚರಿಸಿ, ಅಲ್ಲಿನ ಗಿಡ, ಮರಗಳು ಹಾಗೂ ವಿವಿಧ ಜಾತಿಯ ಸಸಿಗಳ ಬೆಳವಣಿಗೆಯನ್ನು ವೀಕ್ಷಿಸಿ ಅರಣ್ಯ ಇಲಾಖೆಯ ಸಿಬ್ಬಂದಿಗಳ ನಿರಂತರ ಪರಿಶ್ರಮವನ್ನು ಮುಕ್ತಕಂಠದಿಂದ ಶ್ಲಾಘಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹಿರಿಯ ಸಿವಿಲ್ ನ್ಯಾಯಾಧೀಶರಾದ ರವೀಂದ್ರ ಕುಮಾರ ಕಟ್ಟಿಮನಿ ಅವರು ವಹಿಸಿದ್ದರು. ವೇದಿಕೆಯ ಮೇಲೆ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವೆಗಳ ಸಮಿತಿ ಸದಸ್ಯ ಕಾರ್ಯದರ್ಶಿಗಳೂ ಆದ ರಾಮಮೂರ್ತಿ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ಪ್ರಧಾನ ಕಾರ್ಯದರ್ಶಿ ಪಿ.ಬಿ.ಗೌಡರ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ನ್ಯಾಯಾಲಯದ ಸರ್ಕಾರಿ ಅಭಿಯೋಜಕರಾದ ವೀರೇಶ ಮಾಮನಿ, ಹಿರಿಯ ಸಹಾಯಕ ಸರ್ಕಾರಿ ಅಭಿಯೋಜಕರಾದ ನಾಗರಾಜ ಪೂಜಾರ, ಅಪರ ಸರ್ಕಾರಿ ವಕೀಲರಾದ ಎಚ್.ಎಲ್.ಸರೂರ, ಸಹಾಯಕ ಸರ್ಕಾರಿ ಅಭಿಯೋಜಕರಾದ ಬಸವರಾಜ ಆಹೇರಿ, ಸಾಮಾಜಿಕ ವಲಯ ಅರಣ್ಯಾಧಿಕಾರಿ ಗಿರೀಶ ಹಲಕುಡೆ, ಉಪವಲಯ ಅರಣ್ಯಾಧಿಕಾರಿ ರಮೇಶ ಹಿಟ್ನಳ್ಳಿ, ನ್ಯಾಯಾಲಯದ ಸಿಬ್ಬಂದಿ ಅರವಿಂದ ಕುಂಬಾರ ಸೇರಿದಂತೆ ಅರಣ್ಯ ಇಲಾಖೆಯ ಸಿಬ್ಬಂದಿಗಳು ಹಾಗೂ ಹಲವು ಪ್ರಮುಖ ವಕೀಲರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಬಹುಕೋಟಿ ವಂಚನೆ ಶಂಕೆ: ಆದಿತ್ಯ ರಾಜ್ ಕ್ಯಾಪಿಟಲ್ ಪ್ರಕರಣ ಸಿಐಡಿಗೆ



**ಬೆಳಗಾವಿ ವಾರ್ತೆ ಬೆಳಗಾವಿ:** ಸಾರ್ವಜನಿಕರಿಂದ ಹೂಡಿಕೆ, ಠೇವಣಿ ಹಾಗೂ ವಿವಿಧ ಹಣಕಾಸು ಯೋಜನೆಗಳ ಹೆಸರಿನಲ್ಲಿ ಹಣ ಸಂಗ್ರಹಿಸಿ ಹೆಚ್ಚಿನ ಲಾಭದ ಭರವಸೆ ನೀಡಲಾಗಿದೆ ಎಂಬ ಗಂಭೀರ ಆರೋಪ ಎದುರಿಸು ತ್ತಿರುವ ಆದಿತ್ಯ ರಾಜ್ ಕ್ಯಾಪಿಟಲ್ ಸಂಸ್ಥೆಯ ವಿರುದ್ಧ ಜಿಲ್ಲಾಡಳಿತ ಕಠಿಣ ಕ್ರಮಕ್ಕೆ ಮುಂದಾಗಿದೆ.

ಪ್ರಕರಣವು ಬಹುಕೋಟಿ ವಂಚನೆ ಸ್ವರೂಪದ್ದಾಗಿರುವ ಶಂಕೆಯ ಹಿನ್ನೆಲೆಯಲ್ಲಿ ತನಿಖೆ ಸಿಐಡಿಗೆ ಹಸ್ತಾಂತರಿಸಲಾಗಿದೆ. ಅಲ್ಲದೆ, ಪ್ರಕರಣದ ಪ್ರಮುಖ ಆರೋಪಿ ಪರಾರಿಯಾಗದಂತೆ ಲುಕ್ ಔಟ್ ನೋಟಿಸ್ ಜಾರಿ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಮೊಹಮ್ಮದ ರೋಷನ್ ಮತ್ತು ಪೊಲೀಸ್ ಆಯುಕ್ತ ಭೂಷಣ ಗುಲಾಬ್ ಬೋರಸೆ ಅವರು ಜಂಟಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಸಾರ್ವಜನಿಕರಿಂದ ಬಂದ ದೂರುಗಳು ಹಾಗೂ ಸಂಸ್ಥೆಯ ಜಾಹೀ ರಾತು ಪ್ರಕಟಣೆಗಳ ಆಧಾರದ ಮೇಲೆ ತನಿಖೆಗೆ ಆದೇಶ ಮಾಡಲಾಗಿದೆ. ಕರ್ನಾಟಕ ಠೇವಣಿದಾರರ ಹಿತಾಸಕ್ತಿ ರಕ್ಷಣಾ ಕಾಯ್ದೆ, 2004ರ ಸೆಕ್ಷನ್ 3 ಮತ್ತು 4ರಡಿ ಬೆಳಗಾವಿ ಉಪವಿಭಾಗದ ಸಹಾಯಕ ಆಯುಕ್ತರು ತನಿಖೆ ನಡೆಸುತ್ತಿದ್ದಾರೆ ಎಂದರು.

ಪ್ರಕರಣದ ಗಂಭೀರತೆ ಪರಿಗಣಿಸಿ ಪ್ರಮುಖ ಆರೋಪಿ ದೇಶ ತೊರೆಯುವುದು ಅಥವಾ ತನಿಖೆಯಿಂದ ತಪ್ಪಿಸಿಕೊಳ್ಳುವ ಸಾಧ್ಯತೆ ತಡೆಯಲು ಲುಕ್ಔಟ್ ನೋಟಿಸ್ ಜಾರಿ ಮಾಡಲಾಗಿದೆ. ಇದರಿಂದ ವಿಮಾನ ನಿಲ್ದಾಣಗಳು, ಬಂದರುಗಳು ಹಾಗೂ ದೇಶದ ನಿರ್ಗ ಮನ ಕೇಂದ್ರಗಳಲ್ಲಿ ಸಂಬಂಧಿತ ಅಧಿಕಾ ರಿಗಳು ನಿಗಾ ವಹಿಸಲಿದ್ದಾರೆಂದರು.

**ಸಿಐಡಿಗೆ ಹಸ್ತಾಂತರ:** ಆದಿತ್ಯ ರಾಜ್ ಕ್ಯಾಪಿಟಲ್ ಪ್ರಕರಣದಲ್ಲಿ ಸಾರ್ವಜನಿಕರಿಂದ ದೊಡ್ಡ ಪ್ರಮಾಣದಲ್ಲಿ ಹಣ ಸಂಗ್ರಹಿಸಲಾಗಿದೆ ಎಂಬ ಆರೋಪಗಳಿ ರುವುದರಿಂದ, ಇದನ್ನು ಬಹುಕೋಟಿ ವಂಚನೆ ಪ್ರಕರಣ ಎಂದು ಪರಿಗಣಿಸಿ ಹೆಚ್ಚಿನ ತನಿಖೆಗಾಗಿ ಸಿಐಡಿಗೆ ಹಸ್ತಾಂತರಿಸಲಾ ಗಿದೆ. ಹಣದ ಹರಿವು, ಬ್ಯಾಂಕ್ ಖಾತೆ ಗಳು, ಡಿಜಿಟಲ್ ವ್ಯವಹಾರಗಳು, ಹೂಡಿ ಕೆದಾರರ ಪಟ್ಟಿ, ಸಂಸ್ಥೆಯ ದಾಖಲೆಗಳು ಮತ್ತು ಆಸ್ತಿ ವಿವರಗಳ ಬಗ್ಗೆ ಸಿಐಡಿ ಆಳವಾದ ತನಿಖೆ ನಡೆಸುವ ನಿರೀಕ್ಷೆಯಿದೆ.

**ಡಿಸಿ ಆದೇಶದಲ್ಲೇನಿದೆ?:** ಸಂಸ್ಥೆಯು ಸಾರ್ವಜನಿಕರಿಂದ ಹಣ ಸ್ವೀಕರಿಸಲು ಅಗತ್ಯವಾದ ನೋಂದಣಿ, ಅನುಮತಿ, ಪರವಾನಗಿ ಅಥವಾ ನಿಯಂತ್ರಣ ಸಂಸ್ಥೆಗಳ ಮಾನ್ಯತೆ ಹೊಂದಿದೆಯೇ ಎಂಬುದನ್ನೂ ಪರಿಶೀಲಿಸಲು ಸೂಚಿಸ ಲಾಗಿದೆ. ತನಿಖಾ ಅಧಿಕಾರಿಗಳಿಗೆ ಸಂಸ್ಥೆ ಯ ದಾಖಲೆಗಳು, ಒಪ್ಪಂದಗಳು, ಖಾತೆ ಪುಸ್ತಕಗಳು, ಬ್ಯಾಂಕ್ ಖಾತೆ ವಿವರಗಳು, ಎಲೆಕ್ಟ್ರಾನಿಕ್ ದಾಖಲೆಗಳು, ಡಿಜಿಟಲ್ ಡೇಟಾ, ಜಾಹೀರಾತು ಸಾಮಗ್ರಿ ಹಾಗೂ ಪ್ರಚಾರ ಪತ್ರಿಕೆಗಳನ್ನು ಸಂಗ್ರಹಿ ಸುವಂತೆ ಸೂಚಿಸಲಾಗಿದೆ. ಅಗತ್ಯವಿದ್ದರೆ ಸಂಸ್ಥೆಯ ಕಚೇರಿ ಹಾಗೂ ಸಂಬಂಧಿತ ಸ್ಥಳಗಳಲ್ಲಿ ಕಾನೂನುಬದ್ಧವಾಗಿ ಶೋಧ, ಪರಿಶೀಲನೆ ಮತ್ತು ದಾಖಲೆಗಳ ವಶಪಡಿ ಸಿಕೊಳ್ಳುವ ಕ್ರಮವೂ ಕೈಗೊಳ್ಳಬಹು ದಾಗಿದೆ.

**ಭಯ ಬೇಡ:** ಆದಿತ್ಯ ರಾಜ್ ಕ್ಯಾಪಿಟಲ್ ಪ್ರಕರಣಕ್ಕೆ ಸಂಬಂಧಿಸಿದಂತೆ ಹೂಡಿಕೆದಾರರು ಯಾವುದೇ ಕಾರಣಕ್ಕೂ ಆತಂಕಪಡುವ ಅಗತ್ಯವಿಲ್ಲ ಎಂದು ಜಿಲ್ಲಾ ಧಿಕಾರಿ ಹಾಗೂ ಜಿಲ್ಲಾ ದಂಡಾಧಿ ಕಾರಿ ಮೊಹಮ್ಮದ್ ರೋಷನ್ ಅವರು ಸ್ಪಷ್ಟಪಡಿಸಿದ್ದಾರೆ.

ಠೇವಣಿದಾರರ ಹಿತಾಸಕ್ತಿ ರಕ್ಷಿಸುವುದು ಜಿಲ್ಲಾಡಳಿತದ ಮೊದಲ ಆದ್ಯತೆ. ಹಣ ವಾಪಸ್ ನೀಡುವ ಸಂಬಂಧ ಕಾನೂನು ಬದ್ಧ ಅಧಿಕಾರ ದೊರೆತ ನಂತರ, ಹೂಡಿಕೆದಾರರು ಅಗತ್ಯ ದಾಖಲೆ ಒದಗಿಸಿದರೆ ಆರು ತಿಂಗಳೊಳಗೆ ಹಣ ಮರುಪಾವತಿಗೆ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ತಿಳಿಸಿದ್ದಾರೆ.

ಪ್ರಕರಣದ ತನಿಖೆ ಮುಂದುವರಿದಿದ್ದು, ಹೂಡಿಕೆದಾರರ ವಿವರ, ಠೇವಣಿ ದಾಖಲೆಗಳು, ಬ್ಯಾಂಕ್ ವ್ಯವಹಾರಗಳು ಹಾಗೂ ಸಂಸ್ಥೆಯ ಆಸ್ತಿ ಬಾಧ್ಯತೆಗಳ ಕುರಿತು ಪರಿಶೀಲನೆ ನಡೆಯುತ್ತಿದೆ. ಹೂಡಿ ಕೆದಾರರು ತಮ್ಮ ಬಳಿ ಇರುವ ರಸೀದಿ, ಒಪ್ಪಂದ ಪತ್ರ, ಬ್ಯಾಂಕ್ ಪಾವತಿ ದಾಖಲೆ, ಆನ್‌ಲೈನ್ ವರ್ಗಾವಣೆ ವಿವರಗಳು ಹಾಗೂ ಸಂಸ್ಥೆಯಿಂದ ಪಡೆದ ಯಾವುದೇ ದಾಖಲೆಗಳನ್ನು ಸುರಕ್ಷಿತವಾಗಿ ಇಟ್ಟುಕೊಳ್ಳ ಬೇಕು ಎಂದು ಜಿಲ್ಲಾಡಳಿತ ಮನವಿ ಮಾಡಿದೆ.

# ಸಸಿ ನೆಡುವದರೊಂದಿಗೆ ಶೈಕ್ಷಣಿಕ ವರ್ಷ ಆರಂಭ



**ಬೆಳಗಾವಿ ವಾರ್ತೆ ತಾಳಿಕೋಟೆ:** ಪಟ್ಟಣದ ಮೈಲೇಶ್ವರ ಕ್ರಾಸ್‌ನ ಶ್ರೀ ಮಾರುತಿ ಶಿಕ್ಷಣ ಸಂಸ್ಥೆಯಡಿಯಲ್ಲಿ ನಡೆಯುತ್ತಿರುವ ಬ್ರಿಲಿಯಂಟ್ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢ ಶಾಲೆಯಲ್ಲಿ ಪರಿಸರ ದಿನಾಚರಣೆ ಅಂಗವಾಗಿ ಸಸಿಗಳನ್ನು ನೆಡುವದರ ಮೂಲಕ ಶೈಕ್ಷಣಿಕ ವರ್ಷ ಶಾಲಾ ಪ್ರಾರಂಭೋತ್ಸವವನ್ನು ಮಾಡಲಾಯಿತು.

ವಿದ್ಯಾರ್ಥಿಗಳಿಗೆ ಹೂವಿನಿಂದ ಪುಷ್ಪಾರ್ಚನೆ ಗೈಯುವದರೊಂದಿಗೆ ಗುಲಾಬಿ ಹೂವು ನೀಡಿ ಶಾಲೆಯೊಳಗೆ ಬರಮಾಡಿಕೊಳ್ಳಲಾಯಿತ್ತಲ್ಲದೇ ಸರಸ್ವತಿ ಮಹಾ ಪೂಜೆ ಸಲ್ಲಿಸಲಾಯಿತು.

ಪರಿಸರ ದಿನಾಚರಣೆ ಎಂದರೆ ಕೇವಲ ಸಸಿ ನಡುವದಷ್ಟೇ ಅಲ್ಲಾ ನಮ್ಮ ಸುತ್ತಲಿನ ಪರಿಸರವನ್ನು ಸ್ವಚ್ಚತೆಯಾಗಿ ಇಟ್ಟುಕೊಳ್ಳುವದಾಗಿದೆ ಕಸವನ್ನು ಸೇಕರಿಸಿ ಗೊಬ್ಬರವನ್ನಾಗಿ ತಯಾರಿಸುವ ಅನೇಕ ವಿಜ್ಞಾನದ ಪಠ್ಯ ಪುಸ್ತಕಗಳಲ್ಲಿ ಬಂದಿವೆ ಪರಿಸರ ದಿನಾಚರಣೆಯ ಮಹತ್ವವನ್ನು ಅರೀತುಕೊಂಡು ಎಲ್ಲರು ಸಾಗಬೇಕೆಂದು ಸಂಸ್ಥೆಯ ಅಧ್ಯಕ್ಷ ನಾನಾಗೌಡ ನಡುವಿನಮನಿ ಅವರು ವಿದ್ಯಾರ್ಥಿಗಳಿಗೆ ತಿಳಿ ಹೇಳಿದರು.

ಪರಿಸರ ದಿನಾಚರಣೆ ಅಂಗವಾಗಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ಪ್ರಭಂದ ಸ್ಪರ್ದೆ, ಭಾಷಣ ಸ್ಪರ್ದೆ, ರಸ ಪ್ರಶ್ನೇ ಸ್ಪರ್ದೆಯನ್ನು ಆಯೋಜಿಸಲಾಗಿತ್ತು.

ಈ ಸಮಯದಲ್ಲಿ ಪತ್ರಕರ್ತರಾದ ಪ್ರವೀಣ ಘೋರ್ಪಡೆ, ನಿವೃತ್ತ ಪ್ರಾಚಾರ್ಯ ಆರ್.ವ್ಹಿ.ಜಾಲವಾದಿ, ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಆರ್.ಬಿ.ನಡುವಿನಮನಿ, ಕಾರ್ಯದರ್ಶಿ ಎಂ.ಬಿ.ಮಡಿವಾಳರ, ನಿರ್ದೇಶಕರಾದ ಎಸ್.ಎಚ್.ಪಾಟೀಲ, ಶ್ರೀಮತಿ ಎಲ್.ಎಂ.ಬಿರಾದಾರ, ಶ್ರೀಮತಿ ಎನ್.ಎಸ್.ಗಡಗಿ, ಹಾಗೂ ಮೊದಲಾದವರು ಉಪಸ್ಥಿತರಿದ್ದರು.

# ಸರಕಾರಿ ಪ್ರೌಢ ಶಾಲೆಗೆ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಡೆಸ್ಕ ವಿತರಣೆ




**ಬೆಳಗಾವಿ ವಾರ್ತೆ ಮೋಳೆ:** ಮುರಗುಂಡಿ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಸಂಸದೆ ಕುಮಾರಿ ಪ್ರಿಯಾಂಕಾ ಜಾರಕಿಹೊಳಿ ಯವರ ಅನುದಾನದಲ್ಲಿ ಸರಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ 50 ಬೆಂಚುಗಳನ್ನು ವಿತರಿಸಲಾಯಿತು.

ಬೆಂಚಗಳನ್ನು ವಿತರಿಸಿ ಮಾತನಾಡಿದ ಸಂಸದೆ ಪ್ರಿಯಾಂಕ ಜಾರಕಿಹೊಳಿ, ನನ್ನ ಲೋಕಸಭಾ ವ್ಯಾಪ್ತಿಯ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ತಲುಪಿಸುವ ಪ್ರಯತ್ನವನ್ನು ಮಾಡುತ್ತಿರುವೆ ಎಂದವರು ಸೌಲಭ್ಯಗಳ ಕೊರತೆ ಇರುವ ಶಾಲೆಗಳ ಅಭಿವೃದ್ಧಿ ಸಮಿತಿ ಸದಸ್ಯರು ನನ್ನನ್ನು ಸಂಪರ್ಕಿಸಿ ಎಂದು ಮನವಿ ಮಾಡಿದರು.

ಎಸ್‌ಡಿಎಂಸಿ ಅಧ್ಯಕ್ಷ ಮಕ್ಬುಲ್ ನದಾಫ್ ಮಾತನಾಡಿ, ಮುರುಗುಂಡಿಯ ಸರ್ಕಾರಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಸಭಾಭವನ ಒಂದು ಅವಶ್ಯಕತೆ ದಯವಿಟ್ಟು ನಮ್ಮ ಶಾಲೆಗೆ ಸಭಾಭವನ ಮಂಜೂರು ಮಾಡಿಸಬೇಕೆಂದು ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಮನವಿ ಮಾಡಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಂ. ಆರ್. ಮುಂಜೆ, ಕಾಂಗ್ರೆಸ್ ಧುರೀಣರಾದ ರಮೇಶ್ ಸಿಂದಗಿ, ಗಜಾನನ ಮಂಗಸೂಳಿ, ರಾವಸಾಹೇಬ್ ಐಹೊಳೆ, ಸಚಿನ್ ಬುಟಾಳಿ, ಸುನಿತಾ ಐಹೊಳೆ, ರೇಖಾ ಪಾಟೀಲ,ಶಾಲಾ ಮುಖ್ಯಾದಾಪಕ ರವೀಂದ್ರ ಕಡಾಕಡಿ, ಎಸ್ ಡಿ ಎಮ್ ಸಿ ಉಪಾಧ್ಯಕ್ಷ ರವಿ ಶೇಷಗೋಳ, ಲೋಕೋಪಯೋಗಿ ಇಲಾಖೆ ಅಧಿಕಾರಿ ಮಲ್ಲಿಕಾರ್ಜುನ ಮಗದುಮ್ ಜಿಲ್ಲಾ ಪಂಚಾಯತ್ ಅಧಿಕಾರಿ ವೀರಣ್ಣ ವಾಲಿ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ವಿವೇಕ್ ಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ‘ದೇವರ ಆಟ’ ಕಿರುಚಿತ್ರ ಶೀಘ್ರ ಬಿಡುಗಡೆ



**ಬೆಳಗಾವಿ ವಾರ್ತೆ ಮೈಸೂರು:** ಸಾಮಾಜಿಕ ಪ್ರಪಂಚದಲ್ಲಿ ನಡೆಯುವ ತಂದೆ-ಮಗನ ಸಂಬಂಧದ ಬಗ್ಗೆ , ಬಾಂಧವ್ಯವನ್ನು ಹಾಗೂ ಈಗಿನ ಕಾಲಘಟ್ಟಕ್ಕೆ ತಂದೆ-ಮಕ್ಕಳು ಯಾವ ರೀತಿ ಇರಬೇಕೆಂದು ‘ದೇವರ ಆಟ’ ಕಿರುಚಿತ್ರದ ಮೂಲಕ ಮನಮುಟ್ಟುವ ರೀತಿಯಲ್ಲಿ ಮೈಸೂರು ಸೋಮು ಹೇಳಹೊರಟಿದ್ದಾರೆ.

ನಲವತ್ತು ನಿಮಿಷಗಳ ಕಿರುಚಿತ್ರವನ್ನು ಮನೆಮಂದಿಯೆಲ್ಲಾ ವೀಕ್ಷಿಸಬಹುದು. ಚಿತ್ರವನ್ನು ಕೆಲವು ಸ್ಪರ್ಧೆಗಳಿಗೆ ಕಳಿಸಲಾಗುತ್ತಿದೆ. ಹೀಗಾಗಿ ಚಿತ್ರವನ್ನು ಸಾಧ್ಯವಿದ್ದಷ್ಟು ಯಾವುದೇ ಕೊರತೆಯಾ ಗದಂತೆ ಎಲ್ಲ ರೀತಿಯಲ್ಲಿ ರಿಚ್ ಬರುವಂತೆ ಮಾಡುತ್ತಿದ್ದೇವೆ. ಚಿತ್ರವನ್ನು ನೋಡಿದ ಪ್ರೇಕ್ಷಕರು ಸಣ್ಣ ಬದಲಾವಣೆಯನ್ನಂತೂ ತಮ್ಮ ಮನೆಗಳಲ್ಲಿ-ಮನಗಳಲ್ಲಿ ತಂದುಕೊಳ್ಳುವರು. ಚಿತ್ರದ ಎಲ್ಲಾ ತಾಂತ್ರಿಕ ಕೆಲಸ ಮುಗಿದಿದ್ದು ಅತಿ ಶೀಘ್ರದಲ್ಲೇ ಬಿಡುಗಡೆ ಮಾಡಲಾಗುತ್ತದೆ . ನಾನು ಛಾಯಾಗ್ರಾಹಕನಾಗಿ ಇನ್ನೂ ಬೆಳೆಯಬೇಕಾಗಿದೆ ಅದಕ್ಕೆ ಚಿತ್ರರಂಗದವರ ಜೊತೆಗೆ ಮಾಧ್ಯಮದವರ ಪ್ರೋತ್ಸಾಹ ಕೂಡಬೇಕು ಎಂದು ಸುಮಾರು ಇಪ್ಪತ್ತೈದು ಕಿರು ಚಿತ್ರಗಳಿಗೆ ಛಾಯಾಗ್ರ ಹಣ , ಎಂಟು ಸಿನಿಮಾಗಳಿಗೆ ಛಾಯಾ ಗ್ರಾಹಕನಾಗಿ ಕೆಲಸ ಮಾಡಿ ಅನುಭವವಿ ರುವ ನಿರ್ದೇಶಕ ಮೈಸೂರು ಸೋಮು ಹೇಳಿದ್ದಾರೆ. ಮೈಸೂರು ಸುತ್ತಮುತ್ತ ಚಿತ್ರೀಕರಣ ನಡೆಸಿರುವ ಈ ಚಿತ್ರದಲ್ಲಿ ನಾಯಕ ನಟನಾಗಿ ಕಾರ್ತಿಕ್ ಜಯರಾಜ್ ಅಭಿನ ಯಿಸಿದ್ದು ಉಳಿದಂತೆ ಮಂಡ್ಯ ಸತ್ಯ , ಆನಂದ ಬಾಬು, ಅಜಯ್ ಆರ್ ಎಸ್ , ಲೋಕೇಶ್ , ಗಿರೀಶ್ ಮಳವಳ್ಳಿ , ವಿಶ್ವ ಮಳವಳ್ಳಿ ಹಾಗೂ ಹಳ್ಳಿಯ ಗ್ರಾಮೀಣ ಕಲಾವಿದರು ಅಭಿನಯಿಸಿದ್ದಾರೆ. ಸಾಹಿತ್ಯ-ಸಂಭಾಷಣೆ ಜೊತೆಗೆ ಛಾಯಗ್ರಹ ಣ ಸೋಮು ಅವರದಿದ್ದು , ಪತ್ರಿಕಾಸಂ ಪರ್ಕ ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದೆ. ಕಾರ್ತಿಕ್ ಜಯರಾಜ್ ಮತ್ತು ಮೈಸೂರ್ ಸೋಮು ನಿರ್ಮಾಪಕರಾಗಿದ್ದಾರೆ.

# ವಿಶ್ವ ಪರಿಸರ ದಿನ ಅಂಗವಾಗಿ ವನಮಹೋತ್ಸವ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ವಿಶ್ವ ಪರಿಸರ ದಿನ ಅಂಗವಾಗಿ ಬಸವೇಶ್ವರ ನಗರದ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ವನಮಹೋತ್ಸವ ಆಚರಿಸಲಾಯಿತು. ಶಾಲೆಯ ಆವರಣದಲ್ಲಿ ಸಸಿಗಳನ್ನು ನೆಡಲಾಯಿತು. ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ರಾಣಿಚನ್ನಮ್ಮ ಪರಿಸರ ಸೇವಾ ಸಮಿತಿಯ ಕಾರ್ಯದರ್ಶಿ, ಬಸವ ಪರಿಸರ ಸಂರಕ್ಷಣಾ ಸಮಿತಿಯ ಕಾರ್ಯದರ್ಶಿ, ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿಯ ಜಿಲ್ಲಾ ಘಟಕದ ಉಪಾಧ್ಯಕ್ಷ, ಕರ್ನಾಟಕ ವಚನ ಸಾಹಿತ್ಯ ಪರಿಷತ್‌ನ ಜಿಲ್ಲಾ ಘಟಕದ ಕಾರ್ಯಾಧ್ಯಕ್ಷ, ಹೊರಕೇರಿ ಮಾಸ್ತರ ಶಿಕ್ಷಣ ಪ್ರತಿಷ್ಠಾನ ಟ್ರಸ್ಟಿ, ಗ್ರಂಥಪಾಲಕ ಡಾ. ಸುರೇಶ ಡಿ. ಹೊರಕೇರಿ ಅವರು ಸಸಿಗೆ ನೀರುಣಿಸುವ ಮೂಲಕ ಚಾಲನೆ ನೀಡಿ ಮಾತನಾಡಿ ದರು. ಪರಿಸರ ಉಳಿಸಿ, ಪರಿಸರ ಬೆಳೆಸಿ, ನಮ್ಮ ಭೂಮಿ ನಮ್ಮ ಜವಾಬ್ದಾರಿ, ಮುಂತಾದ ಘೋಷಣೆಗಳನ್ನು ಹೇಳುತ್ತಾ ಶುದ್ಧ ಗಾಳಿ, ಶುದ್ಧ ನೀರು, ಸ್ವಚ್ಛತೆ, ಪರಿಸರ ಸಂರಕ್ಷಣೆ, ಸುಂದರ ಪರಿಸರ ನಿರ್ಮಾಣ ಮಾಡುವುದು ನಮ್ಮೆಲ್ಲರ ಜವಾಬ್ದಾರಿ ಎಂದು ಮಕ್ಕಳಲ್ಲಿ ಜಾಗೃತಿ ಮೂಡಿಸಿದರು.

ಪರಿಸರ ಸಂರಕ್ಷಣೆ ಮಾಡಿ, ನಮ್ಮ ನಮ್ಮ ಪರಿಸರವನ್ನು ಸ್ವಚ್ಛವಾಗಿ ಇಟ್ಟುಕೊಂಡರೆ, ಈ ಭೂಮಿಯೇ ಸ್ವರ್ಗವಾಗುತ್ತದೆ. ಪರಿಸರ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದು. ಪ್ರಕೃತಿಯನ್ನು ಸಂರಕ್ಷಿಸಲು ಪ್ರೋತ್ಸಾಹಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದರು. ನಿವೃತ್ತ ವೈದ್ಯಾಧಿಕಾರಿ, ಹಿರಿಯರಾದ ಡಾ ವಿ. ಬಿ. ನಿಟಾಲಿ ಅವರು ಉತ್ತಮ ಆರೋಗ್ಯ ಹಾಗೂ ಪರಿಸರ ಸಂರಕ್ಷಣೆ ಕುರಿತು ಹಲವಾರು ಉಪಯುಕ್ತ ಮಾಹಿತಿಯನ್ನು ಹಂಚಿಕೊಂಡರು. ಶಾಲೆಯ ಹಿರಿಯ ಮುಖ್ಯ ಶಿಕ್ಷಕ ಡಾ ಎಚ್ ಬಿ ಕೊರವರ, ಶಿಕ್ಷಕಿಯರಾದ ಅಕ್ಕಮ್ಮ ವಿ. ಶೆಟ್ಟರ್ , ಶಕುಂತಲಾ ಜಿ ನವಲಗುಂದ, ಅನಸೂಯಾ ವೈ ಮರಕುಂಬಿ, ವಿದ್ಯಾ ಬನ್ನಾ , ಸವಿತಾ ಪಿ ಮಗದೂರ, ಶ್ರೀದೇವಿ ಎಚ್ ಕುಲಕರ್ಣಿ, ವೀಣಾ ಪ್ರ. ಪಾಟೀಲ್, ಜ್ಯೋತಿ ಶಾ ಕೆಲದಿಮಠ, ಶಾಲೆಯ ಮಕ್ಕಳು, ಪಾಲಕರು, ಮುಂತಾದವರು ಉತ್ಸಾಹದಿಂದ ಭಾಗವಹಿಸಿದ್ದರು. ಹೊರಕೇರಿ ಮಾಸ್ತರ್ ಶಿಕ್ಷಣ ಪ್ರತಿಷ್ಠಾನದ ವತಿಯಿಂದ ಹಿರಿಯ ಮುಖ್ಯ ಶಿಕ್ಷಕರಾಗಿ ಪದೋನ್ನತಿ ಹೊಂದಿದ ಡಾ ಎಚ್ ಬಿ ಕೊರವರ ಅವರಿಗೆ ಗ್ರಂಥ ನೀಡಿ , ಮಾಲಾರ್ಪಣೆ ಮಾಡಿ ಆತ್ಮೀಯವಾಗಿ, ಹುತ್ಪೂರ್ವಕವಾಗಿ ಗೌರವಿಸಿದರು.

# ಪತ್ರಕರ್ತ ಶಂಕರ ಹೆಬ್ಬಾಳರಿಗೆ ರಾಜ್ಯಮಟ್ಟದ ಮಾಧ್ಯಮ ರತ್ನ ಸಿರಿ ಪ್ರಶಸ್ತಿ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ :** ತಾಳಿಕೋಟಿ ಪಟ್ಟಣದ ಶ್ರೀ ವಿರಕ್ತೇಶ್ವರ ಭರತನಾಟ್ಯ ತರಬೇತಿ ಶಾಲೆಯಿಂದ ಮಾಧ್ಯಮ ಕ್ಷೇತ್ರದಲ್ಲಿನ ಸಾಧಕರಿಗೆ ಕೊಡಮಾಡುವ ರಾಜ್ಯಮಟ್ಟದ ಮಾಧ್ಯಮ ರತ್ನ ಸಿರಿ ಪ್ರಶಸ್ತಿಗೆ ಮುದ್ದೇಬಿಹಾಳ ತಾಲ್ಲೂಕು ಹಿರಿಯ ವರದಿಗಾರರಾದ ಶಂಕರ ಈ.ಹೆಬ್ಬಾಳ ಅವರನ್ನು ಆಯ್ಕೆ ಮಾಡಲಾಗಿದೆ.

ಜೂ.7 ರಂದು ತಾಳಿಕೋಟಿ ಪಟ್ಟಣದ ಶ್ರೀ ಖಾಸ್ಗತೇಶ್ವರ ಸಭಾಭವನದಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುವುದು ಎಂದು ವಿರಕ್ತೇಶ್ವರ ಭರತನಾಟ್ಯ ತರಬೆತಿ ಶಾಲೆಯ ಸಂಸ್ಥಾಪಕ ಅಧ್ಯಕ್ಷ ವಿ.ಪಿ.ಚಿಕ್ಕಮಠ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ಶಂಕರ ಹೆಬ್ಬಾಳ ಅವರು ಮುದ್ದೇಬಿಹಾಳ ತಾಲ್ಲೂಕಿನಲ್ಲಿ ಪತ್ರಕರ್ತರಾಗಿ ಕಳೆದ 16 ವರ್ಷಗಳಿಂದ ವಿವಿಧ ರಾಜ್ಯಮಟ್ಟದ ದಿನಪತ್ರಿಕೆಗಳಿಗೆ ವರದಿಗಾರರಾಗಿ ಸೇವೆ ಸಲ್ಲಿಸಿದ್ದಾರೆ.



BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001